ಭಾನುವಾರ 02.11.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 88
Digital Varthe Kannada Daily
Volume 01 - Issue 88
Sunday 02.11.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ
DIGITAL VARTHE
digitalvarthe@gmail.com
www.digitalvarthe.com

## ಶ್ರೀಕಾಕುಳಂ ಕಾಶಿಬುಗ್ಗ ವೆಂಕಟೇಶ್ವರ ದೇಗುಲದಲ್ಲಿ ಕಾಲ್ತುಳಿತ, 9 ಮಂದಿ ಸಾವು



**ಹೈದರಾಬಾದ್**: ಕರ್ನೂಲ್ ಬಸ್ ದುರಂತದ ಕಹಿ ನೆನಪು ಮಾಸುವ ಮುನ್ನವೇ ಆಂಧ್ರ ಪ್ರದೇಶದಲ್ಲಿ ಮತ್ತೊಂದು ಭೀಕರ ದುರಂತ ಸಂಭವಿಸಿದೆ. ಶ್ರೀಕಾಕುಳಂ ಜಿಲ್ಲೆಯ ಕಾಶಿಬುಗ್ಗ ಪಟ್ಟಣದ ಶ್ರೀ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಶನಿವಾರ ಸಂಭವಿಸಿದ ಕಾಲ್ತುಳಿತದಲ್ಲಿ ಕನಿಷ್ಠ ಒಂಬತ್ತು ಭಕ್ತರು ಮೃತಪಟ್ಟಿದ್ದಾರೆ. ಹಲವಾರು ಮಂದಿ ಗಾಯಗೊಂಡಿದ್ದಾರೆ. ಕಾರ್ತಿಕ ಮಾಸದ ಏಕಾದಶಿ ಪ್ರಯುಕ್ತ ಪ್ರಾರ್ಥನೆ ಸಲ್ಲಿಸಲು ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದ ಸಮಯದಲ್ಲಿ ದುರಂತ ಸಂಭವಿಸಿದೆ ಎಂದು ಆಂಧ್ರ ಪ್ರದೇಶ ಸಿಎಂ ಕಚೇರಿಯ ಪ್ರಕಟಣೆ ತಿಳಿಸಿದೆ. ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದ್ದು, ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ.

**ನಿಜಕ್ಕೂ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ನಡೆದಿದ್ದೇನು?**

ಕಾರ್ತಿಕ ಮಾಸದ ಏಕಾದಶಿಯ ಕಾರಣ ದೇಗುಲಕ್ಕೆ ಅಪಾರ ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದರು. ದರ್ಶನಕ್ಕಾಗಿ ದೇವಾಲಯದಲ್ಲಿ ಭಕ್ತರು ಜಮಾಯಿಸಿದ್ದರು. ಆರಂಭಿಕ ವರದಿಗಳ ಪ್ರಕಾರ, ದೇವಾಲಯದ ಆವರಣದ ಪ್ರವೇಶದ್ವಾರದ ಬಳಿ ಜನಸಂದಣಿಯ ಒತ್ತಡ ಇದ್ದಕ್ಕಿದ್ದಂತೆ ಹೆಚ್ಚಾಯಿತು. ಇದು ಜನರಲ್ಲಿ ಗೊಂದಲವನ್ನು ಉಂಟುಮಾಡಿತು ಮತ್ತು ಕಾಲ್ತುಳಿತಕ್ಕೆ ಕಾರಣವಾಯಿತು. ಅನೇಕ ಜನರು ಕೆಳಗೆ ಬಿದ್ದು ಕಾಲ್ತುಳಿತಕ್ಕೊಳಗಾದರು.

ಪರಿಸ್ಥಿತಿ ನಿಯಂತ್ರಿಸಲು ಮತ್ತು ರಕ್ಷಣಾ ಕಾರ್ಯಾಚರಣೆಗಾಗಿ ಪೊಲೀಸ್ ತಂಡಗಳು ಮತ್ತು ತುರ್ತು ಸಿಬ್ಬಂದಿ ಸ್ಥಳಕ್ಕೆ ಧಾವಿಸಿದ್ದಾರೆ. ಘಟನೆ ನಡೆದ ಕೆಲವೇ ಕ್ಷಣಗಳಲ್ಲಿ ಕೃಷಿ ಸಚಿವ ಕೆ. ಅಚ್ಚನ್ನಾಯ್ಡು ದೇವಾಲಯಕ್ಕೆ ತಲುಪಿ ಪರಿಸ್ಥಿತಿಯನ್ನು ನಿಭಾಯಿಸಲು ದೇವಾಲಯದ ಅಧಿಕಾರಿಗಳ ಜತೆ ಸಮಾಲೋಚನೆ ನಡೆಸಿದ್ದಾರೆ. ಜನಸಂದಣಿಯನ್ನು ನಿರ್ವಹಿಸಲು ಮತ್ತು ಪರಿಹಾರ ಕಾರ್ಯಗಳಲ್ಲಿ ಸಹಾಯ ಮಾಡಲು ಹೆಚ್ಚುವರಿ ಪೊಲೀಸ್ ಪಡೆಗಳನ್ನು ನಿಯೋಜಿಸಲಾಗಿದೆ.

**ಸಿಎಂ ಚಂದ್ರಬಾಬು ನಾಯ್ಡು ಸಂತಾಪ**

'ಶ್ರೀಕಾಕುಳಂ ಜಿಲ್ಲೆಯ ಕಾಶಿಬುಗ್ಗದಲ್ಲಿರುವ ವೆಂಕಟೇಶ್ವರ ದೇವಸ್ಥಾನದಲ್ಲಿ ಸಂಭವಿಸಿದ ಕಾಲ್ತುಳಿತ ಘಟನೆ ಆಘಾತವನ್ನುಂಟು ಮಾಡಿದೆ. ಈ ದುರಂತದಲ್ಲಿ ಭಕ್ತರ ಸಾವು ಅತೀವ ವೇದನೆ ಉಂಟುಮಾಡಿದೆ. ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸುತ್ತಿದ್ದೇನೆ. ಗಾಯಗೊಂಡವರಿಗೆ ತ್ವರಿತವಾಗಿ ಮತ್ತು ಸರಿಯಾದ ಚಿಕಿತ್ಸೆ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಘಟನೆಯ ಸ್ಥಳಕ್ಕೆ ಭೇಟಿ ನೀಡಿ ಪರಿಹಾರ ಕ್ರಮಗಳನ್ನು ಮೇಲ್ವಿಚಾರಣೆ ಮಾಡುವಂತೆ ಸ್ಥಳೀಯ ಅಧಿಕಾರಿಗಳು ಮತ್ತು ಸಾರ್ವಜನಿಕ ಪ್ರತಿನಿಧಿಗಳನ್ನು ವಿನಂತಿಸಿದ್ದೇನೆ' ಎಂದು ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ತಿಳಿಸಿದ್ದಾರೆ. ಕಾಶಿಬುಗ್ಗ ವೆಂಕಟೇಶ್ವರ ದೇಗುಲ ಸರ್ಕಾರಕ್ಕೆ ಸೇರಿದ ದೇಗುಲ ಅಲ್ಲ. ಹೆಚ್ಚು ಭಕ್ತರು ಸೇರಿದ ಬಗ್ಗೆ ದೇಗುಲದ ಆಡಳಿತ ಮಂಡಳಿ ಮಾಹಿತಿ ನೀಡಿರಲಿಲ್ಲ ಎಂದು ಆಂಧ್ರ ಪ್ರದೇಶದ ಮುಜರಾಯಿ ಇಲಾಖೆ ಮಾಹಿತಿ ನೀಡಿದೆ.

## ತೀವ್ರ ಬಡತನ ನಿರ್ಮೂಲನೆ ಮಾಡಿದ ಭಾರತದ ಮೊದಲ ರಾಜ್ಯ ಕೇರಳ: ಪಿಣರಾಯಿ ವಿಜಯನ್



**ನವದೆಹಲಿ / ತಿರುವನಂತಪುರಂ**: ಕೇರಳ ತೀವ್ರ ಬಡತನವನ್ನು ನಿರ್ಮೂಲನೆ ಮಾಡಿದ ಭಾರತದ ಮೊದಲ ರಾಜ್ಯವಾಗಿದೆ ಎಂದು ಮುಖ್ಯಮಂತ್ರಿ ಪಿಣರಾಯಿ ವಿಜಯನ್ (Pinarayi Vijayan) ಘೋಷಿಸಿದರು. ಕೇರಳ 'ಪಿರವಿ' ಅಥವಾ ರಾಜ್ಯ ರಚನೆಯ ದಿನದಂದು ಕರೆಯಲಾದ ವಿಶೇಷ ಅಧಿವೇಶನದಲ್ಲಿ ವಿಜಯನ್ ಈ ಘೋಷಣೆ ಮಾಡಿದರು.

ನಾವು ಕೇರಳವನ್ನು ತೀವ್ರ ಬಡತನವಿಲ್ಲದ ಮೊದಲ ಭಾರತೀಯ ರಾಜ್ಯವನ್ನಾಗಿ ಮಾಡುವಲ್ಲಿ ಯಶಸ್ವಿಯಾಗಿದ್ದೇವೆ. ಈ ವಿಧಾನಸಭೆಯು ಅನೇಕ ಐತಿಹಾಸಿಕ ಕಾನೂನುಗಳು ಮತ್ತು ನೀತಿ ಘೋಷಣೆಗಳಿಗೆ ಸಾಕ್ಷಿಯಾಗಿದೆ. ನವ ಕೇರಳದ ಸೃಷ್ಟಿಯಲ್ಲಿ ಮತ್ತೊಂದು ಮೈಲಿಗಲ್ಲನ್ನು ಗುರುತಿಸುವ ಕ್ಷಣದಲ್ಲಿ ವಿಧಾನಸಭೆ ಈಗ ಸಭೆ ಸೇರುತ್ತದೆ ಎಂದು ಸಿಎಂ ಹೇಳಿದರು.

ಸರ್ಕಾರ ರಚನೆಯಾದ ಮೊದಲ ಸಚಿವ ಸಂಪುಟ ಸಭೆಯಲ್ಲಿ ತೀವ್ರ ಬಡತನ ನಿರ್ಮೂಲನೆಯು ಪ್ರಮುಖ ನಿರ್ಧಾರಗಳಲ್ಲಿ ಒಂದಾಗಿತ್ತು ಎಂದು ಮುಖ್ಯಮಂತ್ರಿ ಹೇಳಿದರು. ವಿಧಾನಸಭೆ ಚುನಾವಣೆಯ ಸಮಯದಲ್ಲಿ ಜನರಿಗೆ ನೀಡಿದ ಪ್ರಮುಖ ಭರವಸೆಗಳಲ್ಲಿ ಒಂದನ್ನು ಈಡೇರಿಸುವ ಆರಂಭವೂ ಇದಾಗಿದೆ ಎಂದು ಹೇಳಿದರು

ಕಾಂಗ್ರೆಸ್ ನೇತೃತ್ವದ ಯುಡಿಎಫ್ ವಿರೋಧ ಪಕ್ಷವು ವಿಜಯನ್ ಅವರ ಹೇಳಿಕೆಗಳನ್ನು ಸಂಪೂರ್ಣ ವಂಚನೆ ಎಂದು ಕರೆದಿದೆ ಮತ್ತು ಪ್ರತಿಭಟನೆಯಾಗಿ ಅಧಿವೇಶನವನ್ನು ಬಹಿಷ್ಕರಿಸಿದೆ. ಆಡಳಿತ ಪಕ್ಷದ ನಿಲುವನ್ನು ವಿಜಯನ್ ಖಂಡಿಸಿದ್ದಾರೆ. ಬಡತನ ನಿರ್ಮೂಲನೆ ಮಾಡಲು ಸರ್ಕಾರ 1,000 ಕೋಟಿ ರೂ.ಗಳಿಗೂ ಹೆಚ್ಚಿನ ಹೂಡಿಕೆಯೊಂದಿಗೆ, ರಾಜ್ಯ ಸರ್ಕಾರವು 20,648 ಕುಟುಂಬಗಳಿಗೆ ದೈನಂದಿನ ಆಹಾರವನ್ನು ಖಾತ್ರಿಪಡಿಸಿತು. ಅವರಲ್ಲಿ 2,210 ಕುಟುಂಬಗಳಿಗೆ ಬಿಸಿ ಊಟ, 85,721 ವ್ಯಕ್ತಿಗಳಿಗೆ ಅಗತ್ಯ ಚಿಕಿತ್ಸೆ ಮತ್ತು ಔಷಧಿ ಮತ್ತು ಸಾವಿರಾರು ಜನರಿಗೆ ವಸತಿ ಒದಗಿಸಲಾಯಿತು

5,400ಕ್ಕೂ ಹೆಚ್ಚು ಹೊಸ ಮನೆಗಳನ್ನು ನಿರ್ಮಿಸಲಾಗಿದೆ ಮತ್ತು ನಿರ್ಮಾಣ ಹಂತದಲ್ಲಿದೆ. 5,522 ಮನೆಗಳನ್ನು ದುರಸ್ತಿ ಮಾಡಲಾಗಿದೆ ಮತ್ತು 2,713 ಭೂರಹಿತ ಕುಟುಂಬಗಳು ತಮ್ಮ ನಿವಾಸಗಳನ್ನು ನಿರ್ಮಿಸಲು ಭೂಮಿಯನ್ನು ಪಡೆದಿವೆ ಎಂದು ಪಿಣರಾಯಿ ವಿಜಯನ್ ಹೇಳಿದರು. ಇದಲ್ಲದೆ, 21,263 ಜನರು ಮೊದಲ ಬಾರಿಗೆ ಪಡಿತರ ಚೀಟಿಗಳು, ಆಧಾರ್ ಮತ್ತು ಪಿಂಚಣಿಗಳಂತಹ ಅಗತ್ಯ ದಾಖಲೆಗಳನ್ನು ಪಡೆದಿದ್ದಾರೆ ಮತ್ತು 4,394 ಕುಟುಂಬಗಳಿಗೆ ಜೀವನೋಪಾಯ ಯೋಜನೆಗಳಿಂದ ಬೆಂಬಲ ನೀಡಲಾಗಿದೆ ಎಂದರು.ಎಲ್ಲರಿಗೂ ಒಂದೇ ರೀತಿಯ ನೀತಿಯ ಬದಲು, ಸರ್ಕಾರವು 64,006 ದುರ್ಬಲ ಕುಟುಂಬಗಳನ್ನು ಗುರುತಿಸಿದೆ ಮತ್ತು ಪ್ರತಿಯೊಬ್ಬರ ವಿಶಿಷ್ಟ ಅಗತ್ಯಗಳಿಗಾಗಿ ನಿರ್ದಿಷ್ಟ ಸೂಕ್ಷ್ಮ ಯೋಜನೆಗಳನ್ನು ರಚಿಸಿದೆ ಎಂದು ಮುಖ್ಯಮಂತ್ರಿ ತಿಳಿಸಿದರು

## ತನ್ನ ತಮ್ಮನ ಜೊತೆ ಮಲಗಲೊಪ್ಪದ ಹೆಂಡತಿಯನ್ನು 10 ದಿನ ರೂಂನಲ್ಲಿ ಕೂಡಿಹಾಕಿದ ಗಂಡ

**ಹೈದರಾಬಾದ್**; ಮಹಿಳೆಯೊಬ್ಬಳಿಗೆ ಪುಟ್ಟ ಮಗುವಿತ್ತು. ಆಕೆಗೆ ಆಕೆಯ ಗಂಡ ತನ್ನ ತಮ್ಮನ ಜೊತೆ ಲೈಂಗಿಕ ಸಂಬಂಧ ಹೊಂದಲು ಒತ್ತಾಯಿಸುತ್ತಿದ್ದ. ಆದರೆ ಮೈದುನನ ಜೊತೆ ಮಲಗಲು ಆಕೆ ಒಪ್ಪಿರಲಿಲ್ಲ. ಆಕೆಯ ಗಂಡನ ಅಪ್ಪ-ಅಮ್ಮ ಕೂಡ ಸೊಸೆ ತಮ್ಮ ಕಿರಿಯ ಮಗನ ಜೊತೆ ಸಂಬಂಧ (Extramarital Affair) ಹೊಂದಬೇಕೆಂದು ಬಯಸಿದ್ದರು.

ಇದಕ್ಕೆ ಆಕೆ ಒಪ್ಪದಿದ್ದಾಗ ಪುಟ್ಟ ಮಗುವಿನ ಜೊತೆ ಆಕೆಯನ್ನು 10 ದಿನ ರೂಂನಲ್ಲಿ ಕೂಡಿಹಾಕಲಾಗಿದೆ. ಆ ರೂಂನಲ್ಲಿ ಅವರಿಗೆ ಆಹಾರ, ನೀರು, ಕರೆಂಟ್, ಟಾಯ್ಲೆಟ್ ಯಾವ ಸೌಲಭ್ಯವನ್ನೂ ನೀಡದೆ ಕತ್ತಲೆ ಕೋಣೆಯಲ್ಲಿ ಕೂಡಿಹಾಕಲಾಗಿತ್ತು. ಆಕೆಯ ಮಗುವಿಗೆ ಕೇವಲ ಎದೆಹಾಲನ್ನು ನೀಡುತ್ತಾ ಆಕೆ 10 ದಿನಗಳ ಕಾಲ ಆ ರೂಂನಲ್ಲಿ ಬಂಧಿಸಲ್ಪಟ್ಟಿದ್ದರು.

ಆದರೆ, 10 ದಿನ ಹೊಟ್ಟೆಗೆ ಆಹಾರವಿಲ್ಲದೆ ಎಳೆಮಗುವಿಗೆ ಹಾಲನ್ನೂ ನೀಡುತ್ತಿದ್ದುದರಿಂದ ಆಕೆ ಸಂಪೂರ್ಣ ನಿತ್ರಾಣವಾಗಿದ್ದರು. ಅಲ್ಲದೆ, ಟಾಯ್ಲೆಟ್ ವ್ಯವಸ್ಥೆಯೂ ಇಲ್ಲದಿದ್ದರಿಂದ ಆ ರೂಂನಲ್ಲೇ ಆಕೆ ಮತ್ತು ಆಕೆಯ ಮಗು ಮಲವಿಸರ್ಜನೆ ಮಾಡುವ ಅನಿವಾರ್ಯತೆ ಇತ್ತು. ಅದರ ಜೊತೆಗೇ ಅವರು ಮಲಗಬೇಕಿತ್ತು!ಈ ರೀತಿಯ ಅಮಾನವೀಯ ಘಟನೆ ಆಂಧ್ರಪ್ರದೇಶದಲ್ಲಿ ನಡೆದಿದೆ. 2 ವರ್ಷಗಳ ಹಿಂದೆ ರಂಜಿತ್ ಎಂಬಾತನನ್ನು ಮದುವೆಯಾಗಿದ್ದ 25 ವರ್ಷದ ಮಹಿಳೆ ತನ್ನ ಅತ್ತೆ, ಮಾವ, ಅತ್ತಿಗೆಯ ಕಿರುಕುಳದಿಂದ ಬೇಸತ್ತಿದ್ದರು. ಆಕೆಗೆ ಹೆಣ್ಣು ಮಗುವಾಗಿತ್ತು. ಆದರೆ, ರಂಜಿತ್‌ನ ತಮ್ಮ ಪ್ರವೀಣ್ ಜೊತೆ ಸಂಬಂಧ ಬೆಳೆಸಿದರೆ ಆಕೆಗೆ ಗಂಡುಮಗುವಾಗುತ್ತದೆ ಎಂಬ ಕಾರಣಕ್ಕೆ ಅವರೆಲ್ಲರೂ ಆಕೆಯನ್ನು ಪ್ರವೀಣನ ಜೊತೆ ಮಲಗಲು ಒತ್ತಾಯಿಸುತ್ತಿದ್ದರು. ಇದಕ್ಕೆ ಆಕೆ ಒಪ್ಪಿರಲಿಲ್ಲ. ಇದರಿಂದ ಆಕೆಗೆ ಕಿರುಕುಳ ನೀಡಲಾಯಿತು.ಈ ಪ್ರಕರಣವು ರಾಜ್ಯ ಮಾನವ ಹಕ್ಕುಗಳ ಆಯೋಗವನ್ನು ತಲುಪಿದ ನಂತರ ಇದು ದೇಶಾದ್ಯಂತ ಗಮನ ಸೆಳೆದಿದೆ. ಪೊಲೀಸರು ಆ ಮನೆಗೆ ತೆರಳಿ ಆ ಮಹಿಳೆಯನ್ನು ಕತ್ತಲೆ ಕೋಣೆಯಿಂದ ಬಿಡುಗಡೆ ಮಾಡಿದರು. ನಂತರ ಆ ಕುಟುಂಬದ ಸದಸ್ಯರನ್ನು ವಶಕ್ಕೆ ತೆಗೆದುಕೊಳ್ಳಲಾಯಿತು.

## ಡಿಕೆಶಿಗೆ ಸಿಎಂ ಆಗುವ ಅರ್ಹತೆ ಇದೆ - ಡಿಸಿಎಂ ಪರ ಸಚಿವ ಎಂ.ಸಿ ಸುಧಾಕರ್ ಬ್ಯಾಟಿಂಗ್



**ಚಿಕ್ಕಬಳ್ಳಾಪುರ**: ಡಿಕೆ ಶಿವಕುಮಾರ್ ಅವರಿಗೆ ಮುಖ್ಯಮಂತ್ರಿಯಾಗುವ ಎಲ್ಲಾ ಅರ್ಹತೆ ಇದೆ ಎಂದು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ ಸುಧಾಕರ್ ಹೇಳಿದರು.

ರಾಜ್ಯದಲ್ಲಿ ನವೆಂಬರ್‌ನಲ್ಲಿ ಕ್ರಾಂತಿ ಚರ್ಚೆ ವಿಚಾರಕ್ಕೆ ಚಿಕ್ಕಬಳ್ಳಾಪುರದಲ್ಲಿ ಪ್ರತಿಕ್ರಿಯಿಸಿ, ಯಾವ ಕ್ರಾಂತಿಯೂ ಇಲ್ಲ ಬರೀ ಭ್ರಾಂತಿ ಅಷ್ಟೆ. ಕಾಂಗ್ರೆಸ್ ಹೈಕಮಾಂಡ್ ಪ್ರಸ್ತುತ ಬಿಹಾರ ಚುನಾವಣೆ ಕಡೆ ಗಮನ ಇದೆ. ಕ್ರಾಂತಿಯ ಬಗ್ಗೆ ನಮಗ್ಯಾರಿಗೂ ಮಾಹಿತಿ ಇಲ್ಲ. ಕಾಂಗ್ರೆಸ್ ಹೈಕಮಾಂಡ್, ಸಿಎಂ, ಡಿಸಿಎಂ ತೀರ್ಮಾನಕ್ಕೆ ನಾವು ಬದ್ಧರಾಗಿರುತ್ತೇವೆ ಎಂದರು.

ಡಿಸಿಎಂ ಡಿಕೆ ಶಿವಕುಮಾರ್ ಸಿಎಂ ಆಗುವ ಇಂಗಿತದ ಬಗ್ಗೆ ಮಾತನಾಡಿದ ಸಚಿವರು, ಮುಖ್ಯಮಂತ್ರಿ ಅವಕಾಶ ಇದೆ ಅಂದ್ರೆ ಯಾರಾದ್ರೂ ಬೇಡ ಅಂತಾರಾ? ಡಿಕೆಶಿಗೆ ಮುಖ್ಯಮಂತ್ರಿಯಾಗುವ ಅರ್ಹತೆ ಇದೆ. ಸಿದ್ದರಾಮಯ್ಯ ಹಾಗೂ ಡಿಕೆಶಿ ಜೋಡೆತ್ತುಗಳಾಗಿ ಕೆಲಸ ಮಾಡಿದ್ದಾರೆ. ಹೈಕಮಾಂಡ್ ತೆಗೆದುಕೊಳ್ಳೊ ತಿರ್ಮಾನಕ್ಕೆ ನಾವು ಬದ್ಧ ಎಂದು ಚಿಕ್ಕಬಳ್ಳಾಪುರದಲ್ಲಿ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ ಸುಧಾಕರ್ ಹೇಳಿದರು.


ಇದೇ ವೇಳೆ ಈಗ ಹುಟ್ಟಿದ ಮಕ್ಕಳಿಗೆ ಸ್ಮಾರ್ಟ್‌ಫೋನ್ ಬೇಕಿದೆ. ಫೋನ್ ಸಿಕ್ಕ ತಕ್ಷಣ ಪಿಳಿ ಪಿಳಿ ಅಂತ ಕಣ್ಣು ಮಿಟುಕಿಸುತ್ತೆ ಅಂತ ಸಚಿವ ಸಂಪುಟದ ಆಸೆ ವ್ಯಕ್ತಪಡಿಸಿರೋಗೆ ಕುಟಕುವ ಕೆಲಸ ಮಾಡಿದರು.

**ಎಂ, ಸಿಎಂ ಡಿಸಿಎಂ, ಹೈಕಮಾಂಡ್ ನಿರ್ಧಾರಕ್ಕೆ ನಾವು ಬದ್ಧ:**

ಇನ್ನು ಚಿಕ್ಕಬಳ್ಳಾಪುರದಲ್ಲಿ ಶಾಸಕ ಪ್ರದೀಪ್ ಈಶ್ವರ್ ಮಾತನಾಡಿ, ರಾಜ್ಯದಲ್ಲಿ ಅದೇನು ಕ್ರಾಂತಿ ಆಗುತ್ತೊ ಗೊತ್ತಿಲ್ಲ. ಒಟ್ಟಿನಲ್ಲಿ ಸಿಎಂ, ಡಿಸಿಎಂ, ಹೈಕಮಾಂಡ್ ನಿರ್ಧಾರಕ್ಕೆ ನಾವು ಬದ್ಧ ಎಂದರು. ರಾಜಭವನಕ್ಕೆ ಹೋಗ್ತೇನೆ

ಇದೇ ವೇಳೆ ಸಚಿವ ಸಂಪುಟ ವಿಸ್ತರಣೆಯಲ್ಲಿ ನನಗೂ ಒಂದು ಅವಕಾಶ ಸಿಗಲಿ. ನಾನು ಯಾವುದೋ ಒಂದು ರೂಪದಲ್ಲಿ ರಾಜಭವನಕ್ಕೆ ಹೋಗ್ತೇನೆ. ಬಲಿಜ ಸಮುದಾಯದಲ್ಲಿ ನಾನೊಬ್ಬನೇ ಶಾಸಕ ಎಂದು ಸಚಿವನಾಗುವ ಆಸೆ ವ್ಯಕ್ತಪಡಿಸಿದರು. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಹಾಲಿ ಸಚಿವ ಡಾ ಎಂ ಸಿ ಸುಧಾಕರ್ ರನ್ನ ಮುಂದುವರೆಸಲು ತಕರಾರು ಇಲ್ಲ, ಬಾಗೇಪಲ್ಲಿ ಹಿರಿಯ ಶಾಸಕ ಎಸ್.ಎನ್ ಸುಬ್ಬಾರೆಡ್ಡಿಗೆ ಕೊಟ್ಟರೂ ತಕರಾರಿಲ್ಲ. ನಾನೇನೂ ಸನ್ಯಾಸಿಯಲ್ಲ. ನನಗೂ ಸಚಿವ ಆಗೋ ಆಸೆ ಇದೆ ಎಂದರು.

## ಶಬರಿಮಲೆ ಚಿನ್ನ ನಾಪತ್ತೆ ಪ್ರಕರಣ - ದೇವಸ್ಥಾನದ ಮಾಜಿ ಕಾರ್ಯನಿರ್ವಾಹಕ ಅಧಿಕಾರಿ ಸುಧೀಶ್ ಕುಮಾರ್ ಅರೆಸ್ಟ್




**ತಿರುವನಂತಪುರಂ**: ಶಬರಿಮಲೆ ದೇವಸ್ಥಾನದಿಂದ ಚಿನ್ನ ನಾಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ ದೇವಸ್ಥಾನದ ಮಾಜಿ ಕಾರ್ಯನಿರ್ವಾಹಕ ಅಧಿಕಾರಿ ಸುಧೀಶ್ ಕುಮಾರ್‌ರನ್ನು ಎಸ್‌ಐಟಿ (SIT) ಬಂಧಿಸಿದೆ. ಪ್ರಮುಖ ಆರೋಪಿ ಬೆಂಗಳೂರು ಮೂಲದ ಉದ್ಯಮಿ ಉನ್ನಿಕೃಷ್ಣನ್ ಪೊಟ್ಟಿ ಬಂಧನದ ಕೆಲವು ದಿನಗಳ ನಂತರ ಈ ಬೆಳವಣಿಗೆ ನಡೆದಿದೆ.

ತಿರುವನಂತಪುರದ ಅಪರಾಧ ಶಾಖೆಯ ಕಚೇರಿಯಲ್ಲಿ ಎಸ್‌ಐಟಿ ವಿಚಾರಣೆ ನಡೆಸಿದ ನಂತರ ಕುಮಾರ್ ಅವರನ್ನು ಬಂಧಿಸಲಾಯಿತು. ಕುಮಾರ್ 2019ರಲ್ಲಿ ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಸೇವೆ ಸಲ್ಲಿಸಿದ್ದರು ಮತ್ತು ದ್ವಾರಪಾಲಕ (ರಕ್ಷಕ ದೇವರು) ವಿಗ್ರಹಗಳನ್ನು ಚಿನ್ನದಿಂದ ಲೇಪಿಸಲಾಗಿದ್ದು, ದೇವಾಲಯದ ಅಧಿಕೃತ ದಾಖಲೆಗಳಲ್ಲಿ ತಾಮ್ರದ ಹಾಳೆಗಳಾಗಿ ದಾಖಲಿಸಲಾಗಿದೆ ಎಂದು ಮರೆಮಾಚಿದ್ದಾರೆ ಎಂದು ಆರೋಪಿಸಲಾಗಿದೆ.

2019ರಲ್ಲಿ ದ್ವಾರಪಾಲಕ ಫಲಕಗಳನ್ನು ಪ್ರಮುಖ ಆರೋಪಿ ಉನ್ನಿಕೃಷ್ಣನ್ ಪೊಟ್ಟಿಗೆ ಚಿನ್ನದ ಲೇಪನಕ್ಕಾಗಿ ಹಸ್ತಾಂತರಿಸಿದಾಗ, ಸುಧೀಶ್ ಕುಮಾರ್ ಅವುಗಳನ್ನು ತಾಮ್ರದ ಫಲಕಗಳಾಗಿ ದಾಖಲಿಸಿದ್ದಾರೆ ಎಂದು ಹೇಳಲಾಗಿದ್ದು, ಆರೋಪಿಗಳು ನಂತರ ಚಿನ್ನದ ಲೇಪನವನ್ನು ಬೇರ್ಪಡಿಸಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಆಡಳಿತ ಅಧಿಕಾರಿ ಬಿ ಮುರಾರಿ ಬಾಬು ಅವರನ್ನು ಸಹ ಅಧಿಕಾರಿಗಳು ಬಂಧಿಸಿದ್ದಾರೆ.

## ಹಸುವಿನ ಬಾಲ ತುಂಡರಿಸಿ ವಿಕೃತಿ ಮೆರೆದ ಕಿಡಿಗೇಡಿಗಳು



**ತುಮಕೂರು**: ಇತ್ತೀಚಿನ ದಿನಗಳಲ್ಲಿ ನಗರ ಪ್ರದೇಶಗಳಲ್ಲಿ ಮೂಕ ಜೀವಿಗಳ ಮೇಲೆ ಕಿಡಿಗೇಡಿ ಕೃತ್ಯಗಳು ಹೆಚ್ಚಾಗುತ್ತಿವೆ. ಬೆಂಗಳೂರಲ್ಲಿ ಹಸುವಿನ ಕೆಚ್ಚಲು ಕತ್ತರಿಸಿ ವಿಕೃತಿ ಮೆರೆದಿದ್ದ ಘಟನೆ ರಾಜ್ಯದಲ್ಲಿ ಸಾಕಷ್ಟು ಚರ್ಚೆಗೆ ಗ್ರಾಸವಾಗಿತ್ತು. ಆದರೆ ಇದೀಗ ತುಮಕೂರಿನಲ್ಲಿ ಹಸುವಿನ ಬಾಲ ಕತ್ತರಿಸಿ ಕಿರಾತಕ ಕೃತ್ಯ ಎಸಗಿದ್ದು, ಕೋಮು ಭಾವನೆ ಕೆರಳಿಸಲು

ಈ ಕೆಲಸ ನಡೆದಿದೆ ಎಂದು ಆರೋಪ ಕೇಳಿಬಂದಿದೆ. ತುಮಕೂರು, ನವೆಂಬರ್ 01: ಇತ್ತಿಚಿನ ದಿನಗಳಲ್ಲಿ ನಗರ ಪ್ರದೇಶಗಳಲ್ಲಿ ಮೂಕ ಜೀವಿಗಳ ಮೇಲೆ ಕಿಡಿಗೇಡಿ ಕೃತ್ಯಗಳು ಹೆಚ್ಚಾಗುತ್ತಿವೆ. ಬೆಂಗಳೂರಲ್ಲಿ ಹಸುವಿನ ಕೆಚ್ಚಲು ಕತ್ತರಿಸಿ ವಿಕೃತಿ ಮೆರೆದಿದ್ದ ಘಟನೆ ರಾಜ್ಯದಲ್ಲಿ ಸಾಕಷ್ಟು ಚರ್ಚೆಗೆ ಗ್ರಾಸವಾಗಿತ್ತು. ಆದರೆ ಇದೀಗ ತುಮಕೂರಿನಲ್ಲಿ ಹಸುವಿನ ಬಾಲ ಕತ್ತರಿಸಿ ಕಿರಾತಕ ಕೃತ್ಯ ಎಸಗಿದ್ದು, ಕೋಮು ಭಾವನೆ ಕೆರಳಿಸಲು

**ಈ ಕೆಲಸ ನಡೆದಿದೆ ಎಂದು ಆರೋಪ ಕೇಳಿಬಂದಿದೆ.**

ಬೀಡಾಡಿ ಹಸುವೊಂದು ತುಮಕೂರು ನಗರ ಅಶೋಕ ನಗರ, ವಿದ್ಯಾನಗರ, ಎಸ್‌ಐಟಿ ಬಡಾವಣೆಗಳಲ್ಲಿ ಓಡಾಡಿಕೊಂಡಿತ್ತು. ಈ ಬಡಾವಣೆಯ ಅಂಗಡಿ ಮಾಲೀಕರು, ಮನೆಯವರು ಹಸುವಿಗೆ ಧಾನ್ಯವನ್ನು, ಹಣ್ಣುಗಳನ್ನು ಕೊಡುತಿದ್ದರು. ಆದರೆ ಕೆಲ ದಿನಗಳ ಹಿಂದೆ ರಾತ್ರಿವೇಳೆ ಯಾರೋ ಕಿಡಿಗೇಡಿಗಳು ಹಸುವಿನ ಬಾಲವನ್ನು ಮಾರಕಾಸ್ತ್ರಗಳಿಂದ ಕೊಯ್ದು ವಿಕೃತಿ ಮೆರೆದಿದ್ದಾರೆ.

ಬಜರಂಗದಳ ಕಾರ್ಯಕರ್ತರಿಂದ ಹಸುವಿನ ರಕ್ಷಣೆ: ಚಿಕಿತ್ಸೆ

ಕೇವಲ ಹಸುವಿನ ಬಾಲ ಅಷ್ಟೇ ಅಲ್ಲ, ಪೃಷ್ಠ ಭಾಗಕ್ಕೂ ಗಾಯಗೊಳಿಸಲಾಗಿದೆ. ಒಂದೇ ಸಮನೆ ರಕ್ತ ಸುರಿಯುತ್ತಿರುವುದ್ದನ್ನು ಕಂಡ ಸಾರ್ವಜನಿಕರು ಬಜರಂಗದಳ ಕಾರ್ಯಕರ್ತರಿಗೆ ಮಾಹಿತಿ ನೀಡಿದ್ದಾರೆ. ತಕ್ಷಣ ಎಚ್ಚೆತ್ತ ಬಜರಂಗದಳ ಕಾರ್ಯಕರ್ತರು ಪಶು ವೈದ್ಯರನ್ನು ಕರೆ ತಂದು ಚಿಕಿತ್ಸೆ ಕೊಡಿಸಿದ್ದಾರೆ

.ಪಶು ವೈದ್ಯ ಸಿಬ್ಬಂದಿ ಭರತ್ ರಾಜ್ ಅವರು ಹಸುವಿನ ಬಾಲವನ್ನು ಕತ್ತರಿಸಲಾಗಿದೆ ಎಂದು ಖಾತ್ರಿ ಪಡಿಸಿದ್ದು, ಪ್ರಾಥಮಿಕ ಚಿಕಿತ್ಸೆ ನೀಡಿದ್ದಾರೆ. ಬಾಲ ಕತ್ತರಿಸಿದ ಬಳಿಕ ಗಾಯಗಳಾಗಿದ್ದು, ಬಾಲದ ಸುತ್ತ ಇನ್ಫೆಕ್ಷನ್ ಹೆಚ್ಚಾಗಿದೆ. ಈ ನಿಟ್ಟಿನಲ್ಲಿ ಅಗತ್ಯ ಚುಚ್ಚು ಮದ್ದು ನೀಡಿದ್ದಾರೆ.

ಹಸುವಿನ ಬಾಲ ಕತ್ತರಿಸಿದರ ಹಿಂದೆ ಕೋಮು ಭಾವನೆ ಕೆರಳಿಸುವ ಉದ್ದೇಶ ಇದೆ ಎನ್ನಲಾಗಿದೆ. ಕೃತ್ಯ ಎಸಗಿದ ಕಿರಾತಕರನ್ನು ಪತ್ತೆ ಹಚ್ಚಿ ಶಿಕ್ಷಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದು, ತುಮಕೂರು ನ್ಯೂಟೌನ್ ಪೊಲೀಸರಿಗೆ ದೂರು ನೀಡಿದ್ದಾರೆ. ಪೊಲೀಸರ ತನಿಖೆಯಿಂದಷ್ಟೇ ಘಟನೆಯ ಅಸಲಿ ಸಂಗತಿ ಬಯಲಾಗಬೇಕಿದೆ.

## ರಿಲೀಸ್ ಆಗಬೇಕಿದ್ದ ಸಿನಿಮಾದ ಚಿತ್ರೀಕರಣದ ಹಾರ್ಡ್ ಡಿಸ್ಕ್ ಕಳ್ಳತನ



**ಬೆಂಗಳೂರು**: ನಗರದಲ್ಲಿ ಮತ್ತೆ ರಾಮ್ ಜೀ ಗ್ಯಾಂಗ್ ಆಕ್ಟಿವ್ ಆಗಿದೆ. ಕಾರಿನ ಗ್ಲಾಸ್ ಹೊಡೆದು, ರಿಲೀಸ್ ಆಗಬೇಕಿದ್ದ ಸಿನಿಮಾದ ಚಿತ್ರೀಕರಣದ ಹಾರ್ಡ್ ಡಿಸ್ಕ್ ಕಳ್ಳತನ ಮಾಡಲಾಗಿದೆ.

'ಐ ಆಮ್ ಗಾಡ್' ಚಿತ್ರದ ಶೂಟಿಂಗ್ ಮಾಡಿ ವಿಡಿಯೋ ಇದ್ದ ಹಾರ್ಡ್ ಡಿಸ್ಕ್ ಅನ್ನು ವಿಜಯನಗರದಲ್ಲಿ ಗ್ಯಾಂಗ್ ಎಗರಿಸಿದೆ. ಐ ಆಮ್ ಗಾಡ್ ಚಿತ್ರದ ನಿರ್ಮಾಪಕ ಕಂ ಹೀರೋ ಕಾರ್ ಗ್ಲಾಸ್ ಒಡೆದು ಕಳವು ಮಾಡಲಾಗಿದೆ. ನಿರ್ಮಾಪಕ ರವಿ ಗೌಡ ಕಾರು ಗಾಜು ಪುಡಿ ಮಾಡಿ ಕಳ್ಳತನ ಮಾಡಲಾಗಿದೆ. ನಟ ರವಿ ಗೌಡ ವಿಜಯನಗರದಲ್ಲಿ ಕಾರು ನಿಲ್ಲಿಸಿ ಹೋಗಿದ್ದರು. ಈ ವೇಳೆ ಕಾರಿನ ಬಳಿ ಬಂದ ರಾಮ್ ಜೀ ಗ್ಯಾಂಗ್ ಗ್ಲಾಸ್ ಹೊಡೆದಿದೆ. ಕಾರಿನಲ್ಲಿದ್ದ ಹಾರ್ಡ್ ಡಿಸ್ಕ್, 75 ಸಾವಿರ ಹಣ, ಒಂದು ಟ್ಯಾಬ್, ಒಂದು ಕಾಸ್ಟ್ಲಿ ಬ್ಯಾಗ್ ಕಳ್ಳತನ ಮಾಡಿದ್ದಾರೆ.

ರಾಮ್ ಜೀ ಗ್ಯಾಂಗ್ ಕೃತ್ಯ, ಓಡಾಟವು ಸಿಸಿಟಿವಿಯಲ್ಲಿ ಸೆರೆಯಾಗಿತ್ತು. ಬಿಎಂಡಬ್ಲ್ಯೂ ಕಾರ್ ಗ್ಲಾಸ್ ಪುಡಿ ಪುಡಿಯಾಗಿ ಬಿದ್ದಿತ್ತು. ಕೂಡಲೇ ವಿಜಯನಗರ ಪೊಲೀಸರಿಗೆ ಮಾಹಿತಿ ನೀಡಲಾಗಿತ್ತು. ಸ್ಥಳ ಪರಿಶೀಲನೆ ನಡೆಸಿದ ಪೊಲೀಸರು ಅಕ್ಕಪಕ್ಕದ ಸಿಸಿಟಿವಿ ತಪಾಸಣೆ ನಡೆಸಿದ್ದರು. ಪ್ರಕರಣ ದಾಖಲಿಸಿಕೊಂಡ ವಿಜಯನಗರ ಪೊಲೀಸರು ನೇರವಾಗಿ ತಮಿಳುನಾಡಿಗೆ ತೆರಳಿ ಆರೋಪಿಗಳನ್ನು ಬಂಧಿಸಿದ್ದಾರೆ.

ತಂದೆ ಜಯಶೀಲನ್ ಹಾಗೂ ಆತನ ಮಗ ಕಳ್ಳತನ ಮಾಡಿರೋದು ಗೊತ್ತಾಗಿತ್ತು. ಪೊಲೀಸರು ಆರೋಪಿ ಜಯಶೀಲನ್‌ನನ್ನು ಅರೆಸ್ಟ್ ಮಾಡಿದ್ದಾರೆ. ಜಯಶೀಲನ್ ಮಗ ಎಸ್ಕೇಪ್ ಆಗಿದ್ದಾನೆ.

## ಬಲಿ ಪಡೆದ ಪುಂಡಾನೆ ಸೆರೆಗೆ ಅರಣ್ಯ ಇಲಾಖೆ ಆದೇಶ



**ಚಿಕ್ಕಮಗಳೂರು**: ಶೃಂಗೇರಿಯ ಕೆರೆಮನೆ ಗ್ರಾಮದಲ್ಲಿ ಕಾಡಿಗೆ ಸೊಪ್ಪು ತರಲು ಹೋಗಿದ್ದವರನ್ನು ಬಲಿ ಪಡೆದಿದ್ದ ಪುಂಡಾನೆ ಸೆರೆಗೆ ಅರಣ್ಯ ಇಲಾಖೆ ಆದೇಶ ಹೊರಡಿಸಿದೆ.

ದುಬಾರೆ, ಹಾರಂಗಿ ಆನೆ ಶಿಬಿರದ ಸಾಕಾನೆಗಳಿಂದ ಕಾಡಾನೆ ಸೆರೆ ಕಾರ್ಯಾಚರಣೆಗೆ ಸಿದ್ಧತೆ ನಡೆಯುತ್ತಿದೆ. ಏಕಲವ್ಯನ ನೇತೃತ್ವದಲ್ಲಿ ಪುಂಡಾನೆ ಸೆರೆಗೆ ಕಾರ್ಯಾಚರಣೆ ನಡೆಯಲಿದೆ. ಇಂದು ಸಹ ಕಾಡಾನೆಗಳು ತೋಟದ ಮೇಲೆ ದಾಳಿ ನಡೆಸಿ, ಅಡಿಕೆ ಹಾಗೂ ಬಾಳೆಗಿಡಗಳನ್ನು ನಾಶ ಮಾಡಿವೆ ಕಾಡಾನೆ ಹಾವಳಿ ನಿಯಂತ್ರಣಕ್ಕೆ ಕ್ರಮಕೈಗೊಳ್ಳುವಂತೆ ಸಚಿವ ಕೆ.ಜೆ ಜಾರ್ಜ್ ಅವರಿಗೂ ರೈತ ಮುಖಂಡರು ಮನವಿ ಮಾಡಿದ್ದಾರೆ.

ಅರಣ್ಯ ಅಧಿಕಾರಿಗಳು ರೈತರ ಬಳಿ ಎಚ್ಚರಿಕೆಯಿಂದ ಇರಿ ಎನ್ನುತ್ತಾರೆ. ಹಾಗಂತ ರೈತರು ಕೆಲಸಕ್ಕೆ ಹೋಗದೇ ಇರಲು ಸಾಧ್ಯವಿಲ್ಲ. ಕಾಡಾನೆ ಉಪಟಳ ತಪ್ಪಿಸಬೇಕು ಎಂದು ಆಗ್ರಹಿಸಿದ್ದಾರೆ.

ಕಾಡಾನೆ ಹಾವಳಿ ನಿಯಂತ್ರಣಕ್ಕೆ ಕ್ರಮಕೈಗೊಳ್ಳುವಂತೆ ಸಚಿವ ಕೆ.ಜೆ ಜಾರ್ಜ್ ಅವರಿಗೂ ರೈತ ಮುಖಂಡರು ಮನವಿ ಮಾಡಿದ್ದಾರೆ. ಅರಣ್ಯ ಅಧಿಕಾರಿಗಳು ರೈತರ ಬಳಿ ಎಚ್ಚರಿಕೆಯಿಂದ ಇರಿ ಎನ್ನುತ್ತಾರೆ. ಹಾಗಂತ ರೈತರು ಕೆಲಸಕ್ಕೆ ಹೋಗದೇ ಇರಲು ಸಾಧ್ಯವಿಲ್ಲ. ಕಾಡಾನೆ ಉಪಟಳ ತಪ್ಪಿಸಬೇಕು ಎಂದು ಆಗ್ರಹಿಸಿದ್ದಾರೆ.

## ಬಲವಂತದ ಮದುವೆ ತಡೆಯಲು ಬಂದ ಪ್ರಿಯತಮನೇ ಬಲಿ..!

**ಲಕ್ನೋ**: ಉತ್ತರ ಪ್ರದೇಶದ ಹಮೀರ್‌ಪುರ ಜಿಲ್ಲೆಯ ಪರ್ಚ್ ಗ್ರಾಮದಲ್ಲಿ ತನ್ನ ಪ್ರೇಯಸಿಯ ಬಲವಂತದ ಮದುವೆಯನ್ನು ತಡೆಯಲು ಪ್ರಯತ್ನಿಸಿದ ವ್ಯಕ್ತಿಯನ್ನು ಥಳಿಸಿ ಕೊಂದಿರುವ ಘಟನೆ ನಡೆದಿದೆ. ಹತ್ಯೆಯಾದ ವ್ಯಕ್ತಿ ರವಿ (35). ಆತನ ಪ್ರೇಯಸಿ ಮನಿಷಾಳನ್ನು ಆಕೆಯ ಮನೆಯವರು ಬಲವಂತವಾಗಿ ಮದುವೆ ಮಾಡುತ್ತಿರುವುದನ್ನು ತಿಳಿದು, ಆಕೆಯನ್ನು ಭೇಟಿಯಾಗಲು ಗ್ರಾಮಕ್ಕೆ ತೆರಳಿದ್ದ. ಆದರೆ, ಈ ವಿಷಯ ತಿಳಿದ ಮನಿಷಾಳ ಕುಟುಂಬದವರು ಮತ್ತು ಗ್ರಾಮಸ್ಥರು ರವಿಯನ್ನು ಕಂಬಕ್ಕೆ ಕಟ್ಟಿ ಥಳಿಸಿದ್ದಾರೆ.

ರವಿಯ ಮೇಲೆ ಗ್ರಾಮಸ್ಥರು ಮತ್ತು ಮನಿಷಾಳ ಕುಟುಂಬದವರು ಒಟ್ಟಾಗಿ ತೀವ್ರವಾಗಿ ಹಲ್ಲೆ ನಡೆಸಿದ್ದಾರೆ. ಗಂಭೀರವಾಗಿ ಗಾಯಗೊಂಡ ರವಿ ಕುಡಿಯಲು ನೀರು ಕೇಳಿದ್ದಾನೆ, ಆದರೆ ಯಾರೂ ನೀರು ನೀಡಿಲ್ಲ. ಕೊನೆಗೆ ರವಿ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಮನಿಷಾಳ ಚಿಕ್ಕಪ್ಪ ಪಿಂಟು ಕೊಲೆ ಆರೋಪದಿಂದ ತಪ್ಪಿಸಿಕೊಳ್ಳಲು ಆತ್ಮಹತ್ಯೆಗೆ ಯತ್ನಿಸಿದ್ದಾನೆ. ನಂತರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದಾರೆ.

ಪೊಲೀಸರು ರವಿ ಮತ್ತು ಪಿಂಟು ಇಬ್ಬರನ್ನೂ ಮೌದಾಹದ ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಿಸಿದರು. ಆದರೆ, ವೈದ್ಯರು ರವಿ ಈಗಾಗಲೇ ಮೃತಪಟ್ಟಿರುವುದಾಗಿ ದೃಢಪಡಿಸಿದರು. ಪಿಂಟುಗೆ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ರವಿಯ ಸಾವಿನ ಸುದ್ದಿ ತಿಳಿದ ಮನಿಷಾ, ತಾನೂ ಕತ್ತು ಕೊಯ್ದುಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದಾಳೆ. ಮನಿಷಾ ಮತ್ತು ಪಿಂಟು ಇಬ್ಬರ ಸ್ಥಿತಿಯೂ ಗಂಭೀರವಾಗಿದೆ ಎಂದು ಮೂಲಗಳು ತಿಳಿಸಿವೆ. ಪೊಲೀಸರು ಮನಿಷಾಳನ್ನು ಮೌದಾಹದ ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಿಸಿದ್ದಾರೆ.

ಪಿಂಟುನ ಪತ್ನಿ ಪೊಲೀಸರಿಗೆ ದೂರು ನೀಡಿದ್ದು, ರವಿ ನಮ್ಮ ಮನೆಗೆ ಬಂದು ಕೋಪದಿಂದ ಕೂಗಾಡಿದ. ಬಾಗಿಲು ತೆರೆದಾಗ ನನ್ನ ಪತಿಯ ಮೇಲೆ ಚಾಕುವಿನಿಂದ ಹಲ್ಲೆ ಮಾಡಿದ ಎಂದು ಆರೋಪಿಸಿದ್ದಾರೆ. ಆದರೆ, ಪೊಲೀಸರು ಈ ದೂರಿನ ಸತ್ಯಾಸತ್ಯತೆಯನ್ನು ತನಿಖೆ ನಡೆಸುತ್ತಿದ್ದಾರೆ.

## ತೃತೀಯ ಲಿಂಗಿ ತಲೆ ಬೋಳಿಸಿ ವಿಕೃತಿ ಮೆರೆದ ಮತ್ತೊಂದು ಮಂಗಳಮುಖಿ ಗ್ಯಾಂಗ್

**ಬೆಂಗಳೂರು**: ತಮ್ಮ ತಂಡವನ್ನು ತೊರೆದು ಬೇರೆ ತಂಡಕ್ಕೆ ಹೋಗಿದ್ದಕದಕೆ ತಲೆ ಬೋಳಿಸಿ ಹಲ್ಲೆ ನಡೆಸಿರುವ ಘಟನೆ ಬೆಂಗಳೂರಿನ ಬೊಮ್ಮನಹಳ್ಳಿ ವಿರಾಟ್ ನಗರದಲ್ಲಿ ನಡೆದಿದೆ.

ಪ್ರೀತಿ ಮತ್ತು ಚಿನ್ನಿ ನೇತೃತ್ವದ ಮಂಗಳಮುಖಿಯರ ಗುಂಪು, ಸುಕನ್ಯಾ (ಹೆಸರು ಬದಲಿಸಲಾಗಿದೆ) ತಮ್ಮ ತಂಡವನ್ನು ತೊರೆದು ಬೇರೆ ತಂಡದೊಂದಿಗೆ ಸೇರಿದ್ದಕ್ಕಾಗಿ ಮುಂಚೆ ಇದ್ದ ತಂಡದವರು ಕೋಪಗೊಂಡಿತ್ತು. ಹೀಗಾಗಿ ತೀವ್ರ ಕೋಪಗೊಂಡಿದ್ದ ಅವರು ಸುಕನ್ಯಾಳನ್ನು ಕೆ.ಆರ್. ಪುರದಿಂದ ಆಟೋದಲ್ಲಿ ಕಿಡ್ನ್ಯಾಪ್ ಮಾಡಿ ಬೊಮ್ಮನಹಳ್ಳಿ ವಿರಾಟ್ ನಗರಕ್ಕೆ ಕರೆದುಕೊಂಡು ಹೋದರು.

ಸುಕನ್ಯಾ ಕೈಮುಗಿದು ಕ್ಷಮೆ ಯಾಚಿಸಿದರೂ ಸಹ, ಗ್ಯಾಂಗ್ ಸದಸ್ಯರು ಅವರ ಮೇಲೆ ಹಿಟ್ಟಿನ ದೊಣ್ಣೆ, ಸೌಟು ಮತ್ತು ಕೈಗೆ ಸಿಕ್ಕ ಇತರ ವಸ್ತುಗಳಿಂದ ಹೊಡೆದು ಹಲ್ಲೆ ಮಾಡಿದ್ದಾರೆ ಜೊತೆಗೆ ಅವರ ತಲೆ ಕೇಶವನ್ನು ಬೋಳಿಸಿ ಅವಮಾನಿಸಿದ್ದಾರೆ. ಜೊತೆಗೆ ಈ ಘಟನೆನ್ನ ಬೇರೆಯವರಿಗೆ ವಿಡಿಯೋ ಕಾಲ್ ಮಾಡಿ ತೋರಿಸಿದ್ದಾರೆ. ನಂತರ ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆಗಿದೆ.

ನಂತರ ಬೊಮ್ಮನಹಳ್ಳಿ ಪೊಲೀಸ್ ತುರ್ತು ಕ್ರಮ ಕೈಗೊಂಡು ಪ್ರಕರಣವನ್ನು ದಾಖಲಿಸಿದ್ದಾರೆ. ಪೊಲೀಸರು ಸೊಮೋಟೋ ಕೇಸ್ ನೋಂದಣಿ ಮಾಡಿ, ಘಟನೆಯಲ್ಲಿ ಭಾಗವಹಿಸಿದ 7 ಮಂಗಳಮುಖಿಯರನ್ನು ಬಂಧಿಸಿದ್ದಾರೆ.

ನವೆಂಬರ್ 27 ರಂದು ನಿಮ್ಮ ಡಿಜಿಟಲ್ ವಾರ್ತೆ ದಿನಪತ್ರಿಕೆ ಹಾಗೂ ಡಿಜಿಟಲ್ ವಾಹಿನಿ ನೂತನ ಕಚೇರಿ ಉದ್ಘಾಟನೆಗೊಳ್ಳಲಿದ್ದು, ಸರ್ವರಿಗೂ ಆತ್ಮೀಯ ಆಮಂತ್ರಣ

## ಮಂಗಳೂರಿನ ನಟೋರಿಯಸ್ ರೌಡಿ ಕೇರಳದಲ್ಲಿ ಬರ್ಬರ ಹತ್ಯೆ



**ಮಂಗಳೂರು**: ಇಲ್ಲಿನ ನಟೋರಿಯಸ್ ರೌಡಿ ಕೇರಳದಲ್ಲಿ ಹತ್ಯೆಯಾಗಿರುವ ಘಟನೆ ನಡೆದಿದೆ. ನಟೋರಿಯಸ್ ರೌಡಿ ನೌಫಾಲ್ ಅಲಿಯಾಸ್ ಟೊಪ್ಪಿ ನೌಫಾಲ್‌ನನ್ನು ಕೇರಳದ ಉಪ್ಪಳ ಎಂಬಲ್ಲಿ ಮಾರಕಾಸ್ತ್ರಗಳಿಂದ ಕೊಚ್ಚಿ ಬರ್ಬರವಾಗಿ ಹತ್ಯೆ ಮಾಡಲಾಗಿದೆ.

ಈತ 2017ರಲ್ಲಿ ಫರಂಗಿಪೇಟೆಯಲ್ಲಿ ಅಡ್ಯಾರ್‌ನ ರೌಡಿ ಜಿಯಾ ಕೊಲೆ ಪ್ರಕರಣದ ಪ್ರಮುಖ ಆರೋಪಿಯಾಗಿದ್ದ. ಮಂಗಳೂರು ಕಮಿಷನರೇಟ್ ವ್ಯಾಪ್ತಿಯಲ್ಲಿ 10ಕ್ಕೂ ಹೆಚ್ಚು ಪ್ರಕರಣಗಳ ಪ್ರಮುಖ ಆರೋಪಿಯಾಗಿದ್ದ ನೌಫಾಲ್.

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 /
9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಬಾಬಾ ಬುಡನ್ ಸ್ವಾಮಿ ದರ್ಗಾ ವಿವಾದ ನಿಷೇಧಿತ ಸ್ಥಳದಲ್ಲಿ ಮಾಂಸಾಹಾರ ಸೇವನೆ



**ಚಿಕ್ಕಮಗಳೂರು**; ಇನಾಂ ದತ್ತಾತ್ರೇಯ ಬಾಬಾ ಬುಡನ್ ಸ್ವಾಮಿ ದರ್ಗಾ ಆವರಣದಲ್ಲಿ ಮತ್ತೆ ವಿವಾದ ಎದ್ದಿದೆ. ನಿಷೇಧಿತ ಹೋಮ ಮಂಟಪದ ಪಕ್ಕದಲ್ಲೇ ಮುಸ್ಲಿಂ ಕುಟುಂಬ ಮಾಂಸಾಹಾರ ಸೇವಿಸುತ್ತಿರುವ ವಿಡಿಯೋ ವೈರಲ್ ಆಗಿದ್ದು, ಹಿಂದೂ ಸಂಘಟನೆಗಳಿಂದ ತೀವ್ರ ಆಕ್ರೋಶ ವ್ಯಕ್ತವಾಗಿದೆ.

ಜಿಲ್ಲಾಡಳಿತ ಈ ವಿವಾದಿತ ಪ್ರದೇಶದ 200 ಮೀಟರ್ ವ್ಯಾಪ್ತಿಯಲ್ಲಿ ಮಾಂಸಾಹಾರ ಸೇವನೆಗೆ ಪೂರ್ವದಲ್ಲೇ ನಿಷೇಧ ಹೇರಿತ್ತು. ಆದರೂ ನಿಯಮ ಉಲ್ಲಂಘನೆಯಾಗಿದೆ ಎಂಬ ಆರೋಪ ಕೇಳಿಬಂದಿದೆ. ಸಾಮಾಜಿಕ ಜಾಲತಾಣಗಳಲ್ಲಿ ವೇಗವಾಗಿ ಹರಿದಾಡಿದ ಈ ದೃಶ್ಯಗಳು ಆಕ್ರೋಶಕ್ಕೆ ಕಾರಣವಾಗಿದ್ದು, ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಒತ್ತಾಯಿಸಲಾಗಿದೆ. ಅಧಿಕಾರಿಗಳು ವಿಷಯವನ್ನು ಪರಿಶೀಲಿಸುತ್ತಿದ್ದಾರೆ. ಪ್ರಸ್ತುತ ಪರಿಸ್ಥಿತಿ ಶಾಂತವಾಗಿದೆ ಎಂದು ತಿಳಿಸಲಾಗಿದೆ.

ನಿಷೇಧಿತ ಪ್ರದೇಶದಲ್ಲಿ ಮಾಂಸ ಸೇವಿಸಿದವರ ವಿರುದ್ಧ ಕ್ರಮಕ್ಕೆ ಆಗ್ರಹ

ಕಾರ್ತಿಕ ಮಾಸದಲ್ಲಿ ನಡೆಯುವ ದತ್ತಮಾಲಾ ಅಭಿಯಾನಕ್ಕೆ ಈ ವರ್ಷ ಅನುಮತಿ ನೀಡಿಲ್ಲ ಎಂದು ದತ್ತಪೀಠ ಸೇವಾ ಸಮಿತಿಯ ಅಧ್ಯಕ್ಷ ರಂಜಿತ್ ಶೆಟ್ಟಿ ಆರೋಪಿಸಿದ್ದಾರೆ. ಹಿಂದೂ ಆಚರಣೆಗಳಿಗೆ ತಡೆ, ಆದರೆ ನಿಷೇಧಿತ ಪ್ರದೇಶದಲ್ಲಿ ಮಾಂಸ ಸೇವಿಸಿದವರಿಗೆ ಕ್ರಮವಾಗದೇ ಇದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು. ಹೋಮ ಮಂಟಪದ ಪಕ್ಕದಲ್ಲೇ ಮಾಂಸಾಹಾರ ನಡೆದಿದ್ದು, ಇದಕ್ಕೆ ವೀಡಿಯೋ ಸಾಕ್ಷಿ. ಆದರೆ ಜಿಲ್ಲಾಡಳಿತ ಇದನ್ನು ಚಿತ್ರಾಹ್ನವೆಂದು ಹೇಳುತ್ತಿದೆ ಎಂದು ಶೆಟ್ಟಿ ಹೇಳಿದರು. ಶ್ರೀ ರಾಮ ಸೇನೆ, ವಿಹೆಚ್ಪಿ ಹಾಗೂ ಭಜರಂಗ ದಳದ ನೇತೃತ್ವದಲ್ಲಿ ದತ್ತಜಯಂತಿ ಆಚರಣೆ ಜರುಗುವುದಾಗಿ ತಿಳಿಸಿದರು.

ಈ ಹಿಂದೆಯೂ ಹಲವು ವಿವಾದಕ್ಕೆ ಸಿಲುಕಿದ್ದ ಬಾಬಾ ಬುಡನ್ ಸ್ವಾಮಿ ದರ್ಗಾ

ಬಾಬಾಬುಡನ್ ಗಿರಿ ಅಥವಾ ಶ್ರೀಗುರುದತ್ತಾತ್ರೇಯ ಯಾರಿಗೆ ಸೇರಿದ್ದು ಎಂಬ ಬಗ್ಗೆ ವಾದ ವಿವಾದಗಳು ಹಲವು ಬಾರಿ ಕೇಳಿ ಬಂದಿತ್ತು. ಶ್ರೀ ಗುರು ಗುರುದತ್ತಾತ್ರೇಯ ಬಾಬಾಬುಡನ್ ಸ್ವಾಮಿ ದರ್ಗಾ ಎನ್ನುವುದು ಮೂಲ ಸರ್ಕಾರಿ ದಾಖಲಾತಿಗಳಲ್ಲಿ ಇರುವ ಹೆಸರಾಗಿದ್ದು, ಈ ಸ್ಥಳವನ್ನು ಬಾಬಾ ಬುಡನ್ ಗಿರಿ ಎಂದೂ ಮತ್ತು ಇನಾಂ ದತ್ತಾತ್ರೇಯ ಪೀಠ ಎಂದೂ ಕರೆಯುತ್ತಾರೆ. 2022 ರಲ್ಲಿ ಹಿಂದೂ-ಮುಸ್ಲಿಂ ಭಾವೈಕ್ಯತೆಗೆ ಸಾಕ್ಷಿಯಾಗಿದ್ದ ಈ ಧಾರ್ಮಿಕ ಕೇಂದ್ರ ನಮ್ಮದು ಎಂದು ಎರಡೂ ಧರ್ಮದವರ ಮಧ್ಯೆ ವಿವಾದ ಸೃಷ್ಟಿಯಾಗಿತ್ತು.

ಹಾಗೆಯೇ 2025ರ ಆಗಸ್ಟ್ ಅಲ್ಲಿ ದತ್ತಪೀಠದಲ್ಲಿ ನಕಲಿ ಗೋರಿ ನಿರ್ಮಿಸಲಾಗಿದೆ ಎಂಬ ಆರೋಪ ಈ ಹಿಂದೆ ಕೇಳಿ ಬಂದಿತ್ತು. ಈ ಬಗ್ಗೆ ಸತ್ಯ ತಿಳಿಯಲು ಎಸ್ಐಟಿ ರಚನೆ ಮಾಡಿ, ಜಿಪಿಎಸ್ ಆಧುನಿಕ ತಂತ್ರಜ್ಞಾನ ಬಳಸಿ ಉತ್ಖನನ ಮಾಡುವಂತೆ ಹಿಂದೂ ಸಂಘಟನೆಗಳು ಸರ್ಕಾರಕ್ಕೆ ಮನವಿಯನ್ನು ಸಹ ಮಾಡಿತ್ತು.

## ರಾಜಸ್ಥಾನದಲ್ಲಿ 3 ಮೌಲ್ವಿಗಳು ಸೇರಿ ಐವರು ಶಂಕಿತ ಭಯೋತ್ಪಾದಕರು ಅರೆಸ್ಟ್



**ಜೈಪುರ್**: ಭಯೋತ್ಪಾದನೆಗೆ ಹಣಕಾಸು ನೆರವು ನೀಡಿದ ಐವರು ಶಂಕಿತರನ್ನು ರಾಜಸ್ಥಾನ ಎಟಿಎಸ್ (ರಾಜಸ್ಥಾನದಲ್ಲಿ, ಭಯೋತ್ಪಾದನಾ ನಿಗ್ರಹ ದಳ) ಬಂಧಿಸಿದೆ. ಬಂಧಿತ ಮೌಲ್ವಿಗಳನ್ನು ಅಯೂಬ್, ಮಸೂದ್ ಮತ್ತು ಉಸ್ಮಾನ್ ಎಂದು ಗುರುತಿಸಲಾಗಿದೆ. ಇನ್ನೂ ಕರೌಲ್‌ನ ಜುನೈದ್ ಎಂಬಾತನನ್ನು ಬಂಧಿಸಲಾಗಿದ್ದು, ಇನ್ನೋರ್ವನ ಗುರುತು ಪತ್ತೆಯಾಗಿಲ್ಲ.

ಬಂಧಿತರಲ್ಲಿ ಒಬ್ಬನಾದ ಜೋಧ್‌ಪುರದ ಚೋಖಾದ ಅರೇಬಿಯಾ ಮದರಸಾದ ಧರ್ಮಗುರು ಆಯೂಬ್‌ನಿಂದ ಕೆಲವು ದಾಖಲೆಗಳನ್ನು ಎಟಿಎಸ್ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ಆತ 13 ವರ್ಷಗಳಿಂದ ಮದರಸಾದಲ್ಲಿ ಕೆಲಸ ಮಾಡುತ್ತಿದ್ದ. ಇನ್ನೂ ಮದರಸಾದ ಉಳಿದ ಶಿಕ್ಷಕರು ಉಗ್ರರಿಗೆ ಸಹಕರಿಸುವ ಚಟುವಟಿಕೆ ನಡೆಸುತ್ತಿದ್ದಾರೆಯೇ ಎಂಬ ಬಗ್ಗೆ ಯಾವುದೇ ಸುಳಿವು ಸಿಕ್ಕಿಲ್ಲ.

ಎಟಿಎಸ್ (ATS) ಅಧಿಕಾರಿಗಳು ಆರೋಪಿಯ ಮನೆಯಿಂದ 3 ಮೊಬೈಲ್‌ಗಳನ್ನು ವಶಕ್ಕೆ ಪಡೆದಿದ್ದಾರೆ. ಮನೆಯಲ್ಲಿ ಆರೋಪಿ ನಿರ್ಮಿಸಿದ್ದ ಗ್ರಂಥಾಲಯದಿಂದ ಕೆಲವು ದಾಖಲೆಗಳನ್ನು ವಶಕ್ಕೆ ಪಡೆಯಲಾಗಿದೆ. ಅಲ್ಲದೇ ಆತನ ರೂಮ್‌ನ್ನು ಅಧಿಕಾರಿಗಳು ಸೀಲ್ ಮಾಡಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ಆಯೂಬ್‌ನ ಮಕ್ಕಳು ಹಾಗೂ ಪತ್ನಿ, ಆತ ಮೊಬೈಲ್‌ನಲ್ಲಿ ಯೂಟ್ಯೂಬ್ ಮಾತ್ರ ಬಳಸುತ್ತಿದ್ದ. ಸುಮಾರು 20-25 ಪೊಲೀಸರು ಮಫ್ತಿಯಲ್ಲಿ ಬಂದು ಮನೆಯನ್ನು ಸುತ್ತುವರಿದು, ಆತನನ್ನು ಬಂಧಿಸಿ ಕರೆದೊಯ್ದಿದ್ದಾರೆ ಎಂದು ತಿಳಿಸಿದ್ದಾರೆ ಉಳಿದಂತೆ ಜೋಧ್‌ಪುರ್, ಬಾರ್ಮರ್ ಮತ್ತು ಕರೌಲಿ ಸೇರಿದಂತೆ ಹಲವಾರು ಜಿಲ್ಲೆಗಳಲ್ಲಿ ಎಟಿಎಸ್ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಬಂಧಿತರನ್ನು ಜೈಪುರದ ಎಟಿಎಸ್ ಪ್ರಧಾನ ಕಚೇರಿಯಲ್ಲಿ ವಿಚಾರಣೆ ನಡೆಸಲಾಗುತ್ತಿದೆ. ರಾಜ್ಯದಲ್ಲಿ ಭದ್ರತಾ ಸಂಸ್ಥೆಗಳು ಕಟ್ಟೆಚ್ಚರದಲ್ಲಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಆನ್‌ಲೈನ್ ಜಾಹೀರಾತಿಗೆ ಪ್ರತಿಕ್ರಿಯಿಸಿ 11 ಲಕ್ಷ ಕಳೆದುಕೊಂಡ ವ್ಯಕ್ತಿ



**ಚೆನ್ನೈ**: 'ನನ್ನನ್ನು ಗರ್ಭಿಣಿಯನ್ನಾಗಿ ಮಾಡುವ ವ್ಯಕ್ತಿಗಾಗಿ ಹುಡುಕುತ್ತಿದ್ದೇನೆ' ಎಂಬ ಆನ್‌ಲೈನ್ ಜಾಹೀರಾತಿಗೆ ಪ್ರತಿಕ್ರಿಯಿಸಿ ವ್ಯಕ್ತಿಯೊಬ್ಬ 11 ಲಕ್ಷ ಕಳೆದುಕೊಂಡಿರುವ ಘಟನೆ ಪುಣೆಯಲ್ಲಿ ನಡೆದಿದೆ.

ಜಾಹೀರಾತಿನ ಮೇಲೆ ಕ್ಲಿಕ್ ಮಾಡಿದಾಗ, ಆರಂಭಿಕ ಶುಲ್ಕಗಳು, ಸದಸ್ಯತ್ವ ಶುಲ್ಕಗಳು, ಗೌಪ್ಯತೆ ಶುಲ್ಕಗಳನ್ನು ಪಾವತಿಸಬೇಕು ಎಂದು ಆ ವ್ಯಕ್ತಿಗೆ ಸೂಚನೆ ನೀಡಲಾಯಿತು. ಪಾವತಿಗಳನ್ನು ಮಾಡದ ಹೊರತು ಕೆಲಸ ಅಪೂರ್ಣವಾಗಿ ಉಳಿಯುತ್ತದೆ ಎಂದು ಆತನಿಗೆ ತಿಳಿಸಲಾಗಿತ್ತು. ಆತ ಆನ್‌ಲೈನ್ ಮೋಸದ ಜಾಲಕ್ಕೆ ಬಿದ್ದಿದ್ದಾನ ಹಲವು ಆನ್‌ಲೈನ್ ಹಣ ವರ್ಗಾವಣೆಗಳ ನಂತರ, ಆ ವ್ಯಕ್ತಿಗೆ ಜಾಹೀರಾತುದಾರರಿಂದ ಯಾವುದೇ ಸಂಪರ್ಕ ಸಿಕ್ಕಿಲ್ಲ.

ಆಗ ತಾನು ಮೋಸ ಹೋಗಿರುವುದು ಆತನಿಗೆ ಅರಿವಾಗಿದೆ. ಈ ವಂಚನೆಯ ಹಿಂದಿನ ವ್ಯಕ್ತಿಯನ್ನು ಗುರುತಿಸಲು ತನಿಖೆ ನಡೆಯುತ್ತಿದ್ದು, ಅಂತಹ ಜಾಹೀರಾತುಗಳಿಗೆ ಪ್ರತಿಕ್ರಿಯಿಸದಂತೆ ಅಧಿಕಾರಿಗಳು ಸಾರ್ವಜನಿಕರಿಗೆ ಎಚ್ಚರಿಕೆ ನೀಡಿದ್ದಾರೆ.

ನಾಗರಿಕರು ಅನುಮಾನಾಸ್ಪದ ಆನ್‌ಲೈನ್ ಜಾಹೀರಾತುಗಳು ಅಥವಾ ಆಫರ್‌ಗಳಿಗೆ ಪ್ರತಿಕ್ರಿಯಿಸುವುದನ್ನು ನಿಲ್ಲಿಸಬೇಕು. ಯಾರಾದರೂ ವೈಯಕ್ತಿಕ ಕೆಲಸಕ್ಕಾಗಿ ಆನ್‌ಲೈನ್‌ನಲ್ಲಿ ದೊಡ್ಡ ಮೊತ್ತದ ಹಣಕ್ಕೆ ಬೇಡಿಕೆ ಇಟ್ಟರೆ, ಅವರು ತಕ್ಷಣವೇ ಪೊಲೀಸರಿಗೆ ವರದಿ ಮಾಡಬೇಕು ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಆರಂಭದಲ್ಲಿ ಆನ್‌ಲೈನ್ ಜಾಹೀರಾತಿಗೆ ಆ ವ್ಯಕ್ತಿ ಪ್ರತಿಕ್ರಿಯಿಸಿದ ನಂತರ, ತನ್ನನ್ನು ಗರ್ಭಿಣಿ ಮಾಡು ಎಂದು ಮಹಿಳೆಯೊಬ್ಬಳು ಕೇಳಿಕೊಂಡಿರುವ ವೀಡಿಯೋ ಸಂದೇಶವಾಗಿ ರವಾನೆಯಾಗಿದೆ ಎಂಬುದು ತನಿಖೆಯಿಂದ ತಿಳಿದುಬಂದಿದೆ.

ಬಿಹಾರದಲ್ಲೂ ಇದೇ ಮಾದರಿಯ ಸೈಬರ್ ವಂಚನೆಯ ಪ್ರಕರಣವೊಂದು ದಾಖಲಾಗಿತ್ತು. ಇದರಲ್ಲಿ ಸೈಬರ್ ವಂಚಕರು, ಮಕ್ಕಳಿಲ್ಲದ ಮಹಿಳೆಯರನ್ನು ಗರ್ಭಿಣಿಯಾಗಿಸಲು ಲಕ್ಷಗಟ್ಟಲೆ ಹಣ ನೀಡುವುದಾಗಿ ಭರವಸೆ ನೀಡುವ ಮೂಲಕ ಪುರುಷರನ್ನು ವಂಚಿಸಿದ್ದಾರೆ.

ಜನವರಿಯಲ್ಲಿ ಬಿಹಾರದ ನವಾಡಾ ಜಿಲ್ಲೆಯಲ್ಲಿ ಪೊಲೀಸರು ತನಿಖೆ ನಡೆಸಿ ಮೂವರನ್ನು ಬಂಧಿಸಿದ್ದರು. ಆರೋಪಿಗಳು ಪುರುಷರಿಂದ ಹಣ ಸುಲಿಗೆ ಮಾಡುವ ದೊಡ್ಡ ಗ್ಯಾಂಗ್‌ನ ಭಾಗವಾಗಿರಬಹುದು ಎಂದು ಶಂಕಿಸಲಾಗಿದೆ. 'ಅಖಿಲ ಭಾರತ ಗರ್ಭಿಣಿ ಉದ್ಯೋಗ ಸೇವೆ' ವೆಬ್‌ಸೈಟ್ ಅನ್ನು ಬಳಸಿಕೊಂಡು ಪುರುಷರನ್ನು ಬಲೆಗೆ ಬೀಳಿಸಲಾಗುತ್ತಿತ್ತು. ಮಹಿಳೆಯನ್ನು ಗರ್ಭಿಣಿಯಾಗಿಸಲು 10 ಲಕ್ಷದವರೆಗೆ ಮತ್ತು ಅವರು ವಿಫಲವಾದರೂ 50,000 ಹಣವನ್ನು ನೀಡುವುದಾಗಿ ಭರವಸೆ ನೀಡಲಾಗಿತ್ತು.

## ಹೊಂಬಾಳೆ ಸೇರಿ ಹಲವು ನಿರ್ಮಾಣ ಸಂಸ್ಥೆಗಳಿಗೆ ತಲೆನೋವಾದ ನಿರ್ದೇಶಕ



ಒಂದೇ ಒಂದು ಹಿಟ್ ಸಿನಿಮಾ ಸಾಕು ಸಾಮಾನ್ಯ ನಟ ಅಥವಾ ನಿರ್ದೇಶಕ ಸ್ಟಾರ್ ಆಗಿಬಿಡಲು. ಒಂದು ಸಿನಿಮಾ ಹಿಟ್ ಆದ ಕೂಡಲೇ ಅಂಥಹವರ ಹಿಂದೆ ನಿರ್ಮಾಪಕರುಗಳು ಸಾಲುಗಟ್ಟಿ ನಿಲ್ಲುತ್ತಾರೆ. ಆದರೆ ಸಿನಿಮಾದ ಯಶಸ್ಸಿನ ಅಮಲು ತಲೆಗೆ ಏರಿದವರು ಎಲ್ಲರಿಗಿಂತಲೂ ತಾವೇ ದೊಡ್ಡವರು ಎಂದು ಮೆರೆಯಲು ಆರಂಭಿಸಿ, ವೃತ್ತಿಪರತೆಯನ್ನು ಮರೆಯುತ್ತಾರೆ, ಆಗಲೇ ಶುರು ಆಗುವುದು ನಿರ್ಮಾಪಕರುಗಳಿಗೆ ಸಂಕಷ್ಟ. ಈಗ ತೆಲುಗಿನಲ್ಲಿ ಇದೇ ಆಗಿದೆ. ಹೊಂಬಾಳೆ ಸೇರಿದಂತೆ ಇನ್ನೂ ಕೆಲವು ನಿರ್ಮಾಣ ಸಂಸ್ಥೆಗಳು ನಿರ್ದೇಶಕನೊಬ್ಬನಿಂದ ಇಕ್ಕಟ್ಟಿಗೆ ಸಿಲುಕಿವೆ.

'ಹನು-ಮ್ಯಾನ್' ಸಿನಿಮಾ ನಿರ್ದೇಶನ ಮಾಡಿರುವ ಪ್ರಶಾಂತ್ ವರ್ಮಾ ಬಗ್ಗೆ ಈಗ ತೆಲುಗು ಚಿತ್ರರಂಗದ ಕೆಲ ದೊಡ್ಡ ನಿರ್ಮಾಪಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. 'ಹನುಮ್ಯಾನ್' ಸಿನಿಮಾ ಸೂಪರ್ ಹಿಟ್ ಆದ ಬೆನ್ನಲ್ಲೆ ಕೆಲವಾರು ನಿರ್ಮಾಪಕರು ಪ್ರಶಾಂತ್ ವರ್ಮಾಗೆ ಆತ ಕೇಳಿದಷ್ಟು ಮುಂಗಡ ಸಂಭಾವನೆ ಕೊಟ್ಟು ಸಿನಿಮಾ ನಿರ್ದೇಶಿಸಿಕೊಡುವಂತೆ ಕೇಳಿದರು. ಅದರಲ್ಲಿ ಹೊಂಬಾಳೆಯೂ ಒಂದು. ಆದರೆ ಈಗ ಪ್ರಶಾಂತ್ ವರ್ಮಾ ವೃತ್ತಿಪರತೆ ಮರೆತು ವರ್ತಿಸುತ್ತಿದ್ದಾನೆ ಎನ್ನಲಾಗುತ್ತಿದೆ.

ಹೊಂಬಾಳೆ, ಡಿವಿವಿ ಹಾಗೂ ಇನ್ನೂ ಕೆಲ ನಿರ್ಮಾಣ ಸಂಸ್ಥೆಗಳಿಗೆ ನೂರಾರು ಕೋಟಿ ರೂಪಾಯಿ ಸಂಭಾವನೆ ಪಡೆದು ಆ ಹಣವನ್ನು ಸ್ಟುಡಿಯೋ ಮತ್ತು ತಮ್ಮ ಕಚೇರಿ ನಿರ್ಮಾಣಕ್ಕೆ ವ್ಯಯಿಸಿರುವ ಪ್ರಶಾಂತ್ ವರ್ಮಾ ಇದೀಗ ಸಿನಿಮಾ ಪ್ರಾರಂಭಕ್ಕೆ ಮೀನ-ಮೇಷ ಎಣಿಸುತ್ತಿದ್ದು ಇದು ನಿರ್ಮಾಪಕರ ಅಸಮಾಧಾನಕ್ಕೆ ಕಾರಣವಾಗಿದೆ. ಇದೇ ಕಾರಣಕ್ಕೆ ಕೆಲವು ನಿರ್ಮಾಣ ಸಂಸ್ಥೆಗಳು ಪ್ರಶಾಂತ್ ವರ್ಮಾ ವಿರುದ್ಧ ತೆಲುಗಿನ ಫಿಲಂ ಚೇಂಬರ್ ಮೆಟ್ಟಿಲು ಏರಿದ್ದು, ವರ್ಮಾ ವಿರುದ್ಧ ದೂರು ನೀಡಿವೆಯಂತೆ. ಪ್ರಶಾಂತ್ ವರ್ಮಾ, ರಿಷಬ್ ಶೆಟ್ಟಿ ನಟಿಸಲಿರುವ 'ಜೈ ಹನುಮಾನ್' ಸಿನಿಮಾ ಘೋಷಣೆ ಮಾಡಿದ್ದಾರೆ. ಹೊಂಬಾಳೆಯಿಂದ ಅಡ್ವಾನ್ಸ್ ಪಡೆದು ಪ್ರಭಾಸ್ ಜೊತೆಗೆ ಸೂಪರ್ ಹೀರೋ ಸಿನಿಮಾ ಮಾಡುವುದಾಗಿ ಹೇಳಿದ್ದಾರೆ. ಹಿಂದೂ ದೇವರುಗಳ ಕತೆಗಳನ್ನು ಇರಿಸಿಕೊಂಡು ಸೂಪರ್ ಹೀರೋ ಸಿನಿಮಾ ನಿರ್ಮಾಣ ಮಾಡುವುದಾಗಿ ಅದರದ್ದೇ ಯೂನಿವರ್ಸ್ ಕ್ರಿಯೇಟ್ ಮಾಡುವುದಾಗಿಯೂ ಪ್ರಶಾಂತ್ ವರ್ಮಾ ಈ ಹಿಂದೆ ಹೇಳಿದ್ದರು. ಈ ಹಿಂದೆ ಬಾಲಿವುಡ್ ನಟ ರಣ್ವೀರ್ ಸಿಂಗ್ ಜೊತೆಗೆ ಪ್ರಶಾಂತ್ ವರ್ಮಾ ಸಿನಿಮಾ ಮಾಡಲಿದ್ದಾರೆ ಎನ್ನಲಾಗಿತ್ತು. ಆದರೆ ಸಿನಿಮಾ ಸೆಟ್ಟೇರಲಿಲ್ಲ, ರಣ್ವೀರ್ ಸಿಂಗ್ ಸಿನಿಮಾದಿಂದ ಹೊರನಡೆದರು. ರಣ್ವೀರ್ ಸಿಂಗ್ ಸಿನಿಮಾದಿಂದ ಹೊರ ಹೋಗಲು ಪ್ರಶಾಂತ್ ವರ್ಮಾನ ಉದ್ಧಟತನವೇ ಕಾರಣ ಎಂಬ ಸುದ್ದಿ ಆಗಲೇ ಹರಿದಾಡಿತ್ತು. ಆದರೆ ಈಗ ನೋಡಿದರೆ ವರ್ಮಾ ವಿರುದ್ಧ ದೂರು ದಾಖಲಾಗಿದೆ.

ಆದರೆ ಡಿವಿವಿ ನಿರ್ಮಾಣ ಸಂಸ್ಥೆಯು ತಮಗೂ ಹಾಗೂ ಪ್ರಶಾಂತ್ ವರ್ಮಾ ನಡುವೆ ಯಾವುದೇ ಭಿನ್ನಾಭಿಪ್ರಾಯ ಇಲ್ಲ ಎಂದು ಹೇಳಿದೆ. ಆದರೆ ಬೇರೆ ಯಾವ ನಿರ್ಮಾಣ ಸಂಸ್ಥೆಗಳು ಸಹ ಈ ಬಗ್ಗೆ ಯಾವುದೇ ಅಧಿಕೃತ ಹೇಳಿಕೆ ನೀಡಿಲ್ಲ.

## ಇಂಗ್ಲೀಷ್, ಹಿಂದಿ ಭಾಷೆಗಳ ದಾಳಿಯಿಂದ ಕನ್ನಡ ಕಾಪಾಡಬೇಕು: ಡಿ.ಕೆ ಶಿವಕುಮಾರ್

**ಬೆಂಗಳೂರು**; "ಇಡೀ ನವೆಂಬರ್ ತಿಂಗಳಲ್ಲಿ ಖಾಸಗಿ ಹಾಗೂ ಸರ್ಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ಕನ್ನಡದ ಧ್ವಜ ಹಾರಿಸುವ ಬಗ್ಗೆ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ನಡೆಸಿ ತೀರ್ಮಾನ ಮಾಡಲಾಗುವುದು" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಕರ್ನಾಟಕ ರಾಜ್ಯೋತ್ಸವದ ಪ್ರಯುಕ್ತ ನಗರದ ಕಂಠೀರವ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಶಾಲಾ ಮಕ್ಕಳ ಪಥಸಂಚಲನದಲ್ಲಿ ವಂದನೆ ಸ್ವೀಕರಿಸಿ ಹಾಗೂ ಇದಕ್ಕೂ ಮೊದಲು ವಿಧಾನಸೌಧದ ಭುವನೇಶ್ವರಿ ಪ್ರತಿಮೆ ಬಳಿ ಮಾಧ್ಯಮಗಳ ಜತೆ ಮಾತನಾಡಿದರು. ಕರ್ನಾಟಕ ಕೇವಲ ನಾಡಲ್ಲ, ಸಂಸ್ಕೃತಿಯ ಬೀಡು. ಕನ್ನಡ ಕೇವಲ ನುಡಿಯಲ್ಲ, ನಮ್ಮ ಅಂತರಂಗದ ಮಾತು. ಕಲಿತವರಿಗೆ ಅಮೃತ, ನಡೆದವರಿಗೆ ನೆರಳು, ದಾರಿದೀಪ. ಕನ್ನಡ ಎನ್ನುವುದು ಜೀವನದ ವಿಧಾನ. ಇಂತಹ ಕನ್ನಡವನ್ನು ಇಂಗ್ಲಿಷ್ ಹಾಗೂ ಹಿಂದಿ ಭಾಷೆಯ ದಾಳಿಯಿಂದ ನಾವೆಲ್ಲರೂ ಕಾಪಾಡಿಕೊಳ್ಳಬೇಕು" ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಬನ್ನಿ ನಮ್ಮ ಸಂಗಡ ಎಂದು ಕವಿ ಅಡಿಗರ ಕವನ ವಾಚಿಸಿದ ಡಿಸಿಎಂ

"ನಮ್ಮ ಉಸಿರು ಕನ್ನಡ, ನಮ್ಮ ಕಸುವು ಕನ್ನಡ, ನಮ್ಮ ಹೆಸರು ಕನ್ನಡ, ನಮ್ಮ ಕಸುಬು ಕನ್ನಡ, ಕನ್ನಡವಿದು ಕನ್ನಡ, ಬನ್ನಿ ನಮ್ಮ ಸಂಗಡ" ಎಂದು ಗೋಪಾಲಕೃಷ್ಣ ಅಡಿಗರ ಕವನವನ್ನು ವಾಚಿಸಿದರು. ಆದಿಕವಿ ಪಂಪನಿಂದ ಹಿಡಿದು ಬಸವಣ್ಣ, ಅಲ್ಲಮಪ್ರಭು, ಕನಕದಾಸರು, ಪುರಂದರದಾಸರು, ಕುವೆಂಪು, ಬೇಂದ್ರೆ, ಮಾಸ್ತಿ ಹೀಗೆ ಸಾಹಿತ್ಯದ ದೊಡ್ಡ ಪರಂಪರೆಯನ್ನು ನಾವು ಹೊಂದಿದ್ದೇವೆ. ಈ ಎಲ್ಲಾ ಸಾಹಿತ್ಯ ಭಂಡಾರವನ್ನು ಮಕ್ಕಳು ಬಾಚಿಕೊಳ್ಳಬೇಕು" ಎಂದು ಕರೆ ನೀಡಿದರು. "ಕನ್ನಡಕ್ಕೆ ಸುಮಾರು ಎರಡು ಸಾವಿರ ವರ್ಷಗಳ ಇತಿಹಾಸವಿದೆ. ಈ ನೆಲದಲ್ಲಿ ಏನೋ ವೈಶಿಷ್ಟ್ಯ ಅಡಗಿದೆ. ಇಲ್ಲಿಗೆ ಬಂದವರು ಯಾವುದೇ ಕಾರಣಕ್ಕೂ ಮರಳಿ ಹೋಗುವುದಿಲ್ಲ. ಎಲ್ಲರನ್ನೂ ಒಳಗೊಂಡಿರುವ ನಮ್ಮ ಕರ್ನಾಟಕ ಶಾಂತಿಯಿಂದ ಕೂಡಿದೆ. ಹೊರಗಿನಿಂದ ಬಂದವರು ಸಹ ಊಟ, ವಸತಿ ಗಳಿಸಿಕೊಂಡಿದ್ದಾರೆ. ಇದೇ ನಮ್ಮ ಕನ್ನಡ ತಾಯಿ, ಭೂಮಿಯ ವಿಶೇಷ. ಇಲ್ಲಿ ಇರುವ ಅತ್ಯುತ್ತಮ ವಾತಾವರಣ ದೇಶದ ಯಾವ ಭಾಗದಲ್ಲಿಯೂ ಇಲ್ಲ. ನಮ್ಮ ಸಂಸ್ಕೃತಿ ಹಾಗೂ ನೆಲ, ಜಲಕ್ಕೆ ಎಲ್ಲರನ್ನೂ ಆಕರ್ಷಿಸುವ ಗುಣವಿದೆ" ಎಂದರು.

"ಎಲ್ಲಾ ಕನ್ನಡಿಗರನ್ನು ಒಗ್ಗೂಡಿಸಬೇಕು. ಕನ್ನಡಿಗರ ತ್ಯಾಗ, ಬಲಿದಾನ, ಶ್ರಮವನ್ನು ನಾವುಗಳು ಮರೆಯಬಾರದು. ಅನೇಕ ಹಿರಿಯರು ಈ ಭಾಷೆ, ನೆಲ, ಜಲ, ಬಾವುಟದ ಗೌರವವನ್ನು ಕಾಪಾಡಿದ್ದಾರೆ. ದೇಶದ ಯಾವ ರಾಜ್ಯವೂ ಧ್ವಜ, ನಾಡಗೀತೆ ಹೊಂದಿಲ್ಲ.

ಆದರೆ ನಾವು ಇವೆರಡನ್ನೂ ಹೊಂದಿದ್ದೇವೆ. ವಿಧಾನಸೌಧದ ಆವರಣದಲ್ಲಿ ತಾಯಿ ಭುವನೇಶ್ವರಿ ಪ್ರತಿಮೆ ಸ್ಥಾಪಿಸಿದ್ದೇವೆ. ಫಲಕಗಳಲ್ಲಿ ಶೇ. 60 ರಷ್ಟು ಕನ್ನಡ ಕಡ್ಡಾಯಗೊಳಿಸಿದ್ದೇವೆ. ಬೆಂಗಳೂರಿನಲ್ಲಿರುವ ಉದ್ದಿಮೆಗಳು, ಕಾರ್ಖಾನೆಗಳು, ವಾಣಿಜ್ಯ ಕೇಂದ್ರಗಳಲ್ಲಿ ರಾಜ್ಯೋತ್ಸವ ಆಚರಣೆ ಕಡ್ಡಾಯ ಮಾಡಿದ್ದೇವೆ" ಎಂದರು.

"ಈ ವರ್ಷ ಸಮೃದ್ಧಿಯಿಂದ ಕೂಡಿದೆ. ಮಳೆ ಇಳೆಯನ್ನು ತಂಪುಗೊಳಿಸಿದೆ. ಕೆಆರ್ ಎಸ್ ಒಂದೇ ವರ್ಷದಲ್ಲಿ ಮೂರು ಬಾರಿ ತುಂಬಿದೆ" ಎಂದು ಹೇಳಿದರು.


ಜಾಗತಿಕ ಮಟ್ಟಕ್ಕೆ ಕನ್ನಡ, ಕರ್ನಾಟಕವನ್ನು ಕೊಂಡೊಯ್ಯಬೇಕು

"ಕುವೆಂಪು ಅವರು ಹೇಳಿರುವಂತೆ ಕರ್ನಾಟಕ ಶಾಂತಿಯ ತೋಟ. ನಾವೆಲ್ಲರೂ ಜಾತಿ, ಧರ್ಮಗಳನ್ನು ಬಿಟ್ಟು ಸಹಬಾಳ್ವೆಯಿಂದ ಕರ್ನಾಟಕದ ಏಳಿಗೆಗೆ ದುಡಿಯಬೇಕು. ಜಾಗತಿಕವಾಗಿ ಬೆಂಗಳೂರು ಬೆಳಗುತ್ತಿದೆ. ಪ್ರಪಂಚದ ಜನರು ನಮ್ಮನ್ನು ಗಮನಿಸುತ್ತಿದ್ದಾರೆ. ಕನ್ನಡ, ಕರ್ನಾಟಕವನ್ನು ಜಾಗತಿಕ ಮಟ್ಟಕ್ಕೆ ನಾವೆಲ್ಲರೂ ಕೊಂಡೊಯ್ಯಬೇಕು. ಭುವನೇಶ್ವರಿ ತಾಯಿ ಇಡೀ ಭೂಮಿಗೆ ಒಡತಿ. ಕರ್ನಾಟಕದ ನಾಡದೇವತೆ" ಎಂದರು.

"ಶಾಲಾ ಮಕ್ಕಳ ಪಥಸಂಚಲನ ನೋಡುತ್ತಿದ್ದರೆ ನನಗೂ ಸಹ ನನ್ನ ಬಾಲ್ಯದ ದಿನಗಳು ನೆನಪಾಗುತ್ತದೆ. ನಾನು ಸಹ ಇದೇ ರೀತಿ ಸಮವಸ್ತ್ರ ಧರಿಸಿ ಶಿಸ್ತಿನಿಂದ ನಡೆಯುತ್ತಿದ್ದೆ. ಬೇಸ್ ಡ್ರಮ್ ನುಡಿಸುವವನಾಗಿ ಹೆಜ್ಜೆ ಹಾಕಿದ್ದೆ. ಇದೇ ಕ್ರೀಡಾಂಗಣದಲ್ಲಿ ನಾನು ನಡೆದಾಡಿದ್ದು ನೆನಪಾಯಿತು" ಎಂದು ಶಾಲಾ ದಿನವನ್ನು ಮೆಲುಕು ಹಾಕಿದರು.

"ಸಾಮ್ರಾಟ್ ಅಶೋಕ ಚಕ್ರವರ್ತಿಯ ಕಾಲದಿಂದಲೂ ಕನ್ನಡದ ಹಿರಿಮೆಯಿದೆ. ಕನ್ನಡ ಹಾಗೂ ಕರ್ನಾಟಕದ ಇತಿಹಾಸವನ್ನು ಮಾಧ್ಯಮಗಳು ಅತ್ಯುತ್ತಮವಾಗಿ ವರದಿ ಮಾಡಿವೆ. ಕರ್ನಾಟಕದ ಸಮಸ್ತ ಜನತೆಗೆ ಕರ್ನಾಟಕ ರಾಜ್ಯೋತ್ಸವದ ಶುಭಾಶಯಗಳನ್ನು ತಿಳಿಸುತ್ತೇನೆ" ಎಂದರು.

## ದೆಹಲಿ ಹೆಸರು 'ಇಂದ್ರಪ್ರಸ್ಥ' ಎಂದು ಬದಲಾಯಿಸಲು ಅಮಿತ್ ಶಾಗೆ ಪತ್ರ





**ನವದೆಹಲಿ**: ದೆಹಲಿಯ ಹೆಸರನ್ನು ಇಂದ್ರಪ್ರಸ್ಥ ಎಂದ ಬದಲಾಯಿಸುವಂತೆ ಕೂಗೆದ್ದಿದೆ. ದೆಹಲಿಯ ಚಾಂದಿನಿ ಚೌಕ್ ಬಿಜೆಪಿ ಸಂಸದ ಪ್ರವೀಣ್ ಖಂಡೇಲ್‌ವಾಲ್ ಕೇಂದ್ರ ಗೃಹಸಚಿವ ಅಮಿತ್ ಶಾ ಅವರಿಗೆ ಪತ್ರ ಬರೆದು ದೆಹಲಿಯ ಹೆಸರು ಬದಲಾಯಿಸಿ ಇಂದ್ರಪ್ರಸ್ಥ ಎಂದು ಮರುನಾಮಕರಣ ಮಾಡುವಂತೆ ಒತ್ತಾಯಿಸಿದ್ದಾರೆ.

ದೆಹಲಿಯ ಹೆಸರು ಬದಲಾವಣೆ ಭಾರತದ ಆತ್ಮ ಮತ್ತು ಐತಿಹಾಸಿಕ ಸಂಪ್ರದಾಯದ ಪುನರುಜ್ಜೀವನದ ಸಂಕೇತವಾಗಲಿದೆ ಎಂದು ಪ್ರವೀಣ್ ಅವರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಇದನ್ನೂ ಓದಿ: ಕನ್ನಡಿಗರಿಗೆ ಕನ್ನಡದಲ್ಲೇ ರಾಜ್ಯೋತ್ಸವ ಶುಭಾಶಯ ತಿಳಿಸಿದ ಪ್ರಧಾನಿ ಮೋದಿ

ಮಹಾಭಾರತದ ಸಮಯದಲ್ಲಿ ಪಾಂಡವರು ಯಮುನಾ ನಧಿಯ ದಡದಲ್ಲಿ ಇಂದ್ರಪ್ರಸ್ಥ ಎಂಬ ರಾಜಧಾನಿಯನ್ನು ಸ್ಥಾಪಿಸಿದ್ದರು ಎನ್ನುವುದಕ್ಕೆ ಸಾಕ್ಷಿಯಿದೆ ಎಂದು ಈ ಪತ್ರದಲ್ಲಿ ಪ್ರವೀಣ್ ಖಂಡೇಲ್ವಾಲ್ (Praveen Khandelwal) ಪ್ರಸ್ತಾಪಿಸಿದ್ದಾರೆ. ನಂತರ ಈ ನಗರವು ವ್ಯಾಪಾರ, ಸಂಸ್ಕೃತಿ ಮತ್ತು ಆಡಳಿತದ ಕೇಂದ್ರವಾಯಿತು. ಸುಲ್ತಾನರು ಮತ್ತು ಮೊಘಲರ ಅವಧಿಯಲ್ಲಿ, ಈ ಹೆಸರು ದೆಹಲಿಯಾಗಿ ಬದಲಾಯಿತು. 1911 ರಲ್ಲಿ, ಬ್ರಿಟಿಷ್ ಆಳ್ವಿಕೆಯು ನವದೆಹಲಿಯನ್ನು ರಾಜಧಾನಿಯಾಗಿ ಘೋಷಿಸಿತು ಎಂದು ಪತ್ರದಲ್ಲಿ ಹೇಳಿದ್ದಾರೆ. ಏನೇನು ಬದಲಾಗಬೇಕು..?

ಗೃಹ ಸಚಿವ ಅಮಿತ್ ಶಾ ಅವರಿಗೆ ಬರೆದ ಪತ್ರದಲ್ಲಿ ಪ್ರವೀಣ್ ಖಂಡೇಲ್ವಾಲ್ 4 ಬೇಡಿಕೆಗಳನ್ನು ಮುಂದಿಟ್ಟಿದ್ದಾರೆ.

1. ಭಾರತದ ರಾಜಧಾನಿ ದೆಹಲಿಯ ಹೆಸರನ್ನು ಇಂದ್ರಪ್ರಸ್ಥ ಎಂದು ಬದಲಾಯಿಸಬೇಕು.
2. ಹಳೆ ದೆಹಲಿ ರೈಲು ನಿಲ್ದಾಣವನ್ನು ಇಂದ್ರಪ್ರಸ್ಥ ಜಂಕ್ಷನ್ ಎಂದು ಮರುನಾಮಕರಣ ಮಾಡಬೇಕು.
3. ಇಂದಿರಾಗಾಂಧಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಇಂದ್ರಪ್ರಸ್ಥ ವಿಮಾನ ನಿಲ್ದಾಣ ಎಂದು ಮರುನಾಮಕರಣ ಮಾಡಬೇಕು.
4. ದೆಹಲಿಯ ಯಾವುದಾದರೂ ಒಂದು ಪ್ರಮುಖ ಸ್ಥಳದಲ್ಲಿ ಪಾಂಡವರ ಭವ್ಯ ಪ್ರತಿಮೆಗಳನ್ನು ಸ್ಥಾಪಿಸಬೇಕು.

ಅಯೋಧ್ಯೆ, ಕಾಶಿ ಮತ್ತು ಪ್ರಯಾಗ್‌ರಾಜ್‌ನಂತಹ ನಗರಗಳು ತಮ್ಮ ಪ್ರಾಚೀನ ಗುರುತನ್ನು ಮರಳಿ ಪಡೆದಾಗ, ದೆಹಲಿಯು ತನ್ನ ಮೂಲ ಹೆಸರಿಗೆ ಮರಳುವುದರಿಂದ ಸಂಸ್ಕೃತಿ ಶ್ರೀಮಂತವಾಗುತ್ತದೆ. ದೆಹಲಿ ಇಂದ್ರಪ್ರಸ್ಥ ಎಂದು ಮರುನಾಮಕರಣ ಮಾಡುವುದರಿಂದ ರಾಜಧಾನಿಯಲ್ಲಿ ಪ್ರವಾಸೋದ್ಯಮವೂ ವೃದ್ಧಿಯಾಗುತ್ತದೆ ಎಂದು ಅವರು ಹೇಳಿದರು.

ಇಂದ್ರಪ್ರಸ್ಥ ಬೇಡಿಕೆಯನ್ನು ಬೆಂಬಲಿಸಲು ಅವರು ಐತಿಹಾಸಿಕ ಉಲ್ಲೇಖಗಳನ್ನು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಮಹಾಭಾರತದ ಅವಧಿ: ಪಾಂಡವರು ತಮ್ಮ ರಾಜಧಾನಿಯನ್ನು ಹಸ್ತಿನಾಪುರದಿಂದ ಸ್ಥಳಾಂತರಿಸಿ ಯಮುನಾ ನದಿಯ ದಡದಲ್ಲಿ ಇಂದ್ರಪ್ರಸ್ಥವನ್ನು ಸ್ಥಾಪಿಸಿದರು.

ಮೌರ್ಯರಿಂದ ಗುಪ್ತರ ಕಾಲದವರೆಗೆ: ಇಂದ್ರಪ್ರಸ್ಥವು ವ್ಯಾಪಾರ, ಸಂಸ್ಕೃತಿ ಮತ್ತು ಆಡಳಿತದ ಪ್ರಮುಖ ಕೇಂದ್ರವಾಗಿತ್ತು.

ರಜಪೂತರ ಅವಧಿ (11ನೇ-12ನೇ ಶತಮಾನಗಳು): ತೋಮರ್ ರಾಜರು ಇದನ್ನು ಢಿಲ್ಲಿಕಾ ಎಂದು ಕರೆದರು. ಇದರಿಂದ ದೆಹಲಿ ಎಂಬ ಹೆಸರು ಬಂತು.

ಸುಲ್ತಾನರು ಮತ್ತು ಮೊಘಲ್ ಅವಧಿ: ಸಿರಿ, ತುಘಲಕಾಬಾದ್, ಫಿರೋಜ್ ಷಾ ಕೋಟ್ಲಾ ಮತ್ತು ಶಹಜಹಾನಾಬಾದ್‌ನಂತಹ ನಗರಗಳು ಅಭಿವೃದ್ಧಿ ಹೊಂದಿದವು. ಆದರೆ ಭೌಗೋಳಿಕ ಕೇಂದ್ರವು ಪ್ರಾಚೀನ ಇಂದ್ರಪ್ರಸ್ಥವಾಗಿಯೇ ಉಳಿಯಿತು.

ಬ್ರಿಟಿಷ್ ಅವಧಿ (1911): ಪಾಂಡವರ ರಾಜಧಾನಿ ಇದ್ದ ಅದೇ ಐತಿಹಾಸಿಕ ಭೂಮಿಯಲ್ಲಿ ನವದೆಹಲಿಯನ್ನು ರಾಜಧಾನಿಯನ್ನಾಗಿ ಮಾಡಲಾಯಿತು.

## ವಿಜಯಪುರದಲ್ಲಿ ವಾಸವಿದ್ದ ತಮಿಳುನಾಡು ಮೂಲದ ಉಗ್ರ



**ವಿಜಯಪುರ**: ಕೊಯಮತ್ತೂರಿನಲ್ಲಿ 27 ವರ್ಷ ಹಿಂದೆ ಸಂಭವಿಸಿದ್ದ ಸ್ಫೋಟ ಪ್ರಕರಣದ ಆರೋಪಿಯೂ ಆಗಿರುವ ಮಿಳುನಾಡು ಮೂಲದ ಉಗ್ರ ಟೈಲರ್ ರಾಜಾ ಅಲಿಯಾಸ್ ರಾಜಾ ಸಿದ್ಧಿಕಿಯ ವಿಜಯಪುರ ಮನೆಯಲ್ಲಿ ತಮಿಳುನಾಡು ಭಯೋತ್ಪಾದನಾ ನಿಗ್ರಹ ದಳ ಸಿಬ್ಬಂದಿ ಶೋಧ ನಡೆಸಿದ್ದಾಗ ಮಹತ್ವದ ದಾಖಲೆಗಳು ಸಿಕ್ಕ ಬಗ್ಗೆ ಇದೀಗ ಮಾಹಿತಿ ಹೊರಬಿದ್ದಿದೆ. ಇದೇ 2025 ರ ಜುಲೈ 9 ರಂದು ವಿಜಯಪುರ ನಗರದಲ್ಲಿ ಟೈಲರ್ ರಾಜಾನನ್ನು ತಮಿಳುನಾಡಿನ ಭಯೋತ್ಪಾದನಾ ನಿಗ್ರಹ ದಳ ಬಂಧಿಸಿತ್ತು. ವಿಜಯಪುರದ ಇಬ್ರಾಹಿಂ ರೋಜಾ ಏರಿಯಾದಲ್ಲಿ ಉಗ್ರ ವಾಸವಿದ್ದ ಮನೆಯನ್ನು ತಮಿಳುನಾಡಿನ ಉಗ್ರ ನಿಗ್ರಹ ಪಡೆ ಶೋಧ ನಡೆಸಿತ್ತು. ಆ ಸಂದರ್ಭದಲ್ಲಿ, ಉಗ್ರ ಬಳಸುತ್ತಿದ್ದ ನಕಲಿ ದಾಖಲೆಗಳನ್ನು ಪತ್ತೆ ಮಾಡಿರುವುದು ಇದೀಗ ಬಯಲಾಗಿದೆ.

ಉಗ್ರನ ಮನೆಯಲ್ಲಿ ಶೋಧ ನಡೆಸಿದ್ದ ತಮಿಳುನಾಡು ಭಯೋತ್ಪಾದನಾ ನಿಗ್ರಹ ದಳಕ್ಕೆ ನಕಲಿ ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್, ಗ್ಯಾಸ್ ಬುಕ್, ಡ್ರೈವಿಂಗ್ ಲೈಸೆನ್ಸ್ ಪತ್ತೆಯಾಗಿತ್ತು.

**ಟೈಲರ್ ರಾಜಾ ಅಲಿಯಾಸ್ ರಾಜಾ ಸಿದ್ಧಿಕಿ ಯಾರು?**

ಟೈಲರ್ ರಾಜಾ ಅಲಿಯಾಸ್ ರಾಜಾ ಸಿದ್ಧಿಕಿ 1998 ರಲ್ಲಿ ತಮಿಳುನಾಡಿನ ಕೊಯಮತ್ತೂರಿನಲ್ಲಿ ಸಂಭವಿಸಿದ್ದ ಸರಣಿ ಬಾಂಬ್ ಸ್ಫೋಟದ ಆರೋಪಿ. ಅಂದು ಸಂಭವಿಸಿದ್ದ ಬಾಂಬ್ ಸ್ಫೋಟಗಳಲ್ಲಿ 58 ಜನರು ಸಾವನ್ನಪ್ಪಿ, 250 ಜನ ಗಾಯಗೊಂಡಿದ್ದರು. ಆ ನಂತರ ತಲೆ ಮರೆಸಿಕೊಂಡು ಹಲವು ರಾಜ್ಯಗಳಲ್ಲಿ ರಾಜಾ ಸಿದ್ಧಿಕಿ ಓಡಾಡಿದ್ದ. ಮಹಾರಾಷ್ಟ್ರದ ಕೊಲ್ಹಾಪುರದಲ್ಲಿ ಟೈಲರಿಂಗ್ ಕಲಿತು, ಅಲ್ಲಿ ಬೇರೆ ಹೆಸರಿನಲ್ಲಿ ಹಲವು ವರ್ಷ ಕೆಲಸ ಮಾಡಿದ್ದ. 014ರಲ್ಲಿ ವಿಜಯಪುರಕ್ಕೆ ಬಂದಿದ್ದ ಉಗ್ರ ರಾಜಾ ಸಿದ್ಧಿಕಿ

2014ರಲ್ಲಿ ವಿಜಯಪುರಕ್ಕೆ ಬಂದಿದ್ದ ಟೈಲರ್ ರಾಜಾ ಅಲಿಯಾಸ್ ರಾಜಾ ಸಿದ್ಧಿಕಿ ಕರ್ನಾಟಕದ ಹುಬ್ಬಳ್ಳಿ, ಆಲಮೇಲ, ವಿಜಯಪುರ ನಗರದಲ್ಲಿ ಟೀಕಾಣಿ ಹೂಡಿದ್ದ. ವಿಜಯಪುರ ನಗರದ ಎಪಿಎಂಸಿಯಲ್ಲಿ ಹೋಲ್‌ಸೇಲ್ ತರಕಾರಿ ಮಾರಾಟ ಮಾಡುತ್ತಿದ್ದ. 2025ರ ಜುಲೈ 9 ರಂದು ವಿಜಯಪುರದಲ್ಲಿ ತಮಿಳುನಾಡು ಭಯೋತ್ಪಾದನಾ ನಿಗ್ರಹ ದಳಕ್ಕೆ ಸಿಕ್ಕಿ ಬಿದ್ದಿದ್ದ. ಆತ ವಿಜಯಪುರದಲ್ಲಿ ಶಹಜಾನ್ ಶೇಖ್ ಎಂದು ಹೆಸರು ಬದಲಿಸಿಕೊಂಡಿದ್ದ. ಕರ್ನಾಟಕಕ್ಕೆ ಬಂದ ಬಳಿಕ ಶಹಜಾನ್ ಶೇಖ್ ಎಂದು ಹೆಸರು ಬದಲಿಸಿಕೊಂಡಿದ್ದ ಆತ ಮಹಾರಾಷ್ಟ್ರದಲ್ಲಿ ಟೈಲರ್ ರಾಜಾ ಎಂದು ಗುರುತಿಸಿಕೊಂಡಿದ್ದ. ಕೊಲ್ಹಾಪುರದಲ್ಲಿ ಟೈಲರಿಂಗ್ ಕಲಿತ ಬಳಿಕ ಟೈಲರ್ ರಾಜಾ ಎಂದು ಹೆಸರು ಬದಲಿಸಿದ್ದ. ಬಳಿಕ ಕರ್ನಾಟಕದ ಹುಬ್ಬಳ್ಳಿಯಲ್ಲಿ, ಆಲಮೇಲ, ವಿಜಯಪುರದಲ್ಲಿ ಜಹಜಾನ್ ಶೇಖ್ ಹೆಸರಲ್ಲಿ ಟೀಕಾಣಿ ಹೂಡಿದ್ದ.

**ಉಗ್ರರ ಹಿಂದೆ ನಕಲಿ ಆಧಾರ್ ಮಾಫಿಯಾ?**

ಉಗ್ರ ಸಿದ್ಧಿಕಿ ಮನೆಯಲ್ಲಿ ದೊರೆತಿರುವ ದಾಖಲೆಗಳು ಭಯೋತ್ಪಾದಕರ ಹಿಂದೆ ನಕಲಿ ಆಧಾರ್ ಮಾಫಿಯಾ ಕಾರ್ಯಾಚರಿಸುತ್ತಿದೆಯಾ ಎನ್ನುವ ಶಂಕೆಗೆ ಕಾರಣವಾಗಿದೆ. ಸದ್ಯ ಉಗ್ರ ಸಿದ್ಧಿಕಿ ಮನೆಯಲ್ಲಿ ದೊರೆತ ದಾಖಲೆಗಳು ಹಲವು ಅನುಮಾನಗಳನ್ನು ಹುಟ್ಟುಹಾಕಿದೆ.

## ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವ್ರ ಅಥವಾ ಡಿ.ಕೆ.ಶಿವಕುಮಾರ?: ಹೆಚ್‌ಡಿಕೆ



**ಬೆಂಗಳೂರು**: ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಥವಾ ಡಿ.ಕೆ. ಶಿವಕುಮಾರ್ ಅವರ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಪ್ರಶ್ನಿಸಿದರು. ನಗರದಲ್ಲಿ ಮಾತನಾಡಿದ ಅವರು, ಗುಂಡಿ ಮುಚ್ಚುವ ಡೆಡ್‌ಲೈನ್ ವಿಚಾರಕ್ಕೆ ಸಂಬಂಧಿಸಿದಂತೆ ಡಿಕೆಶಿ ಕೇಳಿ ಎಂದಿದ್ದು ಸಿಎಂ ಅವರ ಬೇಜವಾಬ್ದಾರಿ ಹೇಳಿಕೆ ಎಂಬುದು ನನ್ನ ಅಭಿಪ್ರಾಯ. ಮುಖ್ಯಮಂತ್ರಿಗಳು ಸಿದ್ದರಾಮಯ್ಯ ಅವ್ರಾ? ಅಥವಾ ಶಿವಕುಮಾರ್ ಅವ್ರಾ? ಮುಖ್ಯಮಂತ್ರಿಗಳ ಸಭೆ ಮಾಡಿ ಒಂದು ಡೆಡ್‌ಲೈನ್ ಕೊಟ್ರು. ಗುಂಡಿ ಮುಚ್ಚಲು ಕಾಲದ ಗಡುವು ಕೊಟ್ಟು ಮುಚ್ಚಿಲ್ಲ. ಮುಖ್ಯಮಂತ್ರಿ ಮಾತಿಗೂ ಸಹ ಎಷ್ಟು ಬೆಲೆ ಅಧಿಕಾರಿಗಳು ಕೊಡ್ತಾ ಇದ್ದಾರೆ ಗೊತ್ತಾಗ್ತಿದೆ. ರಾಜ್ಯದ ಸಿಎಂ ಆಗಿ ನಿರ್ವಹಣೆ ಮಾಡೋಕೆ ಅಸಮರ್ಥರಾಗಿದ್ದಾರೆ ಎಂದು ಅಸಮಾಧಾನ ಹೊರಹಾಕಿದರು ನ.21 ಕ್ಕೆ ಡಿಕೆಶಿ ಪದಗ್ರಹಣ ಸುದ್ದಿ ಬಗ್ಗೆ ಮಾತನಾಡಿ, ಅದು ಅವರ ಪಕ್ಷದಲ್ಲಿನ ತೀರ್ಮಾನಗಳು. ಅವರಿಗೆ ಬಿಟ್ಟಿರೋದು ನಾನು ಈ ವಿಷಯದಲ್ಲಿ ನಾನು ಮಾತಾಡೋದಿಲ್ಲ. ಮಾತಾಡಿದರೆ ಸಣ್ಣತನವಾಗುತ್ತೆ. ಅವರ ಪಕ್ಷದಲ್ಲಿ ಏನು ತೀರ್ಮಾನ ಮಾಡ್ತಾರೋ ಮಾಡಲಿ ಎಂದು ತಿಳಿಸಿದರು.

ಜನರ ಮನೆ ಮುಂದೆ ಕಸ ಹಾಕಿರೋದು ನೋಡ್ಡೆ. ಅವ್ರು ಕಸ ಹಾಕಿದ್ರು ಅಂತ ಬೀದಿಯಲ್ಲಿ ಇರೋ ಕಸ ತಂದು ಅವ್ರ ಮನೆ ಮುಂದೆ ಹಾಕಿದ್ರೆ ಅರ್ಥ ಇದೀಯಾ? ಅದರಿಂದ ಏನು ಸಾಧನೆ ಮಾಡ್ತಾರೆ? ಇಲ್ಲಿ ಸರ್ಕಾರ ಸರಿಯಾದ ರೀತಿಯಲ್ಲಿ ಕಸ ವಿಲೇವಾರಿ ಮಾಡುವ ಜವಾಬ್ದಾರಿ ಇದೆ. ವೈಜ್ಞಾನಿಕ ತೀರ್ಮಾನ ಮಾಡದೇ ಈ ರೀತಿ ಮಾಡೋದು ಸರಿಯಲ್ಲ. ಅವರಿಗೆ ಏನ್ ಆಗಿದೆ ಅಂದ್ರೆ ಕಸ ವಿಲೇವಾರಿ ಮಾಡೋಕೆ ಜಾಗ ಇಲ್ಲ. ಮನೆಗಳ ಮುಂದೆ ಹಾಕಿದ್ರೆ ಅವರ ಮನೆಯವರು ಎಲ್ಲಾದ್ರು ಹಾಕಬಹುದು ಅಂತ. ಸರ್ಕಾರ ಹೊಸ ಕಾರ್ಯಕ್ರಮ ಮಾಡಿದೆ ವ್ಯಂಗ್ಯವಾಡಿದರು.

ಜಾತಿಗಣತಿ ಸಮೀಕ್ಷೆ ನಡೆಸಿ ಏನು ಸಾಧನೆ ಮಾಡ್ತಾರೆ ಅದರಲ್ಲಿ. ಎಷ್ಟರಮಟ್ಟಿಗೆ ಸಮೀಕ್ಷೆ ನಡೆಸಿದ್ದಾರೆ. ಎಷ್ಟರಮಟ್ಟಿಗೆ ಜನ ಆ ಸಮೀಕ್ಷೆಗೆ ಸ್ಪಂದಿಸಿದ್ದಾರೆ. ಇಲ್ಲಿ ಇರೋದು ಸರ್ಕಾರದ ಕಾರ್ಯಕ್ರಮ. ಯಾರು ಬಡತನದಲ್ಲಿ ಇದ್ದಾರೆ. ಇಲ್ಲಿ ಜಾತಿ ಪ್ರಶ್ನೆ ಇಲ್ಲ. ಎಲ್ಲ ಜಾತಿಯಲ್ಲಿ ಬಡವರು ಇದ್ದಾರೆ.

ಮೊದಲು ಶಿಕ್ಷಣ ಕೊಡುವ ಕೆಲಸ ಮಾಡಬೇಕು. ಇವತ್ತು 63 ಸಾವಿರ ಶಿಕ್ಷಕರ ಕೊರತೆ ಇದೆ ಅಂತ ನೋಡ್ಡೆ. ನಿಮ್ಮ ಬೆಂಗಳೂರು ವಿವಿಯಲ್ಲಿ 150 ಶಿಕ್ಷಕರನ್ನ ಇಟ್ಟುಕೊಂಡಿದ್ದಾರೆ. ಇಂತಹ ಸರ್ಕಾರ ಯಾವ ಸಮೀಕ್ಷೆ ಮಾಡಿ ಏನು ಸಾಧನೆ ಮಾಡುತ್ತೆ. ಸರ್ಕಾರದಲ್ಲಿ ಹಲವಾರು ಲೋಪಗಳು ಇವೆ. ಅವರ ಹಿಡನ್ ಅಜೆಂಡಾಗಳಿಗೆ ಮಾಡಿರುವ ಸಮೀಕ್ಷೆ ಅದು.

ನಾಡಿನ ಜನತೆ ಉದ್ಧಾರಕ್ಕೆ ಮಾಡಿರೋ ಸಮೀಕ್ಷೆ ಅಲ್ಲ ಎಂದು ವಾಗ್ದಾಳಿ ನಡೆಸಿದರು ನೋಡೋಣ ಈಗ ಟನಲ್ ಕೆಲಸ ಪ್ರಾರಂಭ ಮಾಡ್ತಾರೆ. ನುರಿತ ತಜ್ಞರ ಅಭಿಪ್ರಾಯ ಪಡೆದು ಕೆಲಸ ಆರಂಭ ಮಾಡ್ತಾರೆ ನೋಡೋಣ. ಜನರಿಗೆ ಸಮಸ್ಯೆ ಬಗೆಹರಿಯಬೇಕು. ಇಲ್ಲಿ ಟನಲ್ ರೋಡ್ ಮಾಡ್ತಾರೋ ಎಲಿವೆಟೆಡ್ ರಸ್ತೆ ಮಾಡ್ತಿರೋ ಅದು ನಿಮಗೆ ಬಿಟ್ಟಿರೋದು.

ಜನರು ಪ್ರತಿನಿತ್ಯ ಜನಪ್ರತಿನಿಧಿಗಳು ಮತ್ತು ಸರ್ಕಾರವನ್ನ ಗಮನಿಸ್ತಾರೆ. ಜನರ ಬದುಕಿನಲ್ಲಿ ಚೆಲ್ಲಾಟ ಆಡಬೇಡಿ ಎಚ್ಚರಿಸಿದರು. ಅವಕಾಶ ಸಿಕ್ಕರೆ ಚುನಾವಣೆಗೆ ಸಿದ್ಧ ಎಂಬ ಆರ್.ಅಶೋಕ್ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿ, ಅವಕಾಶ ಸಿಕ್ಕರೆ ಚುನಾವಣೆಗೆ ಹೋಗಲೇ ಬೇಕಲ್ಲಾ? ಸರ್ಕಾರ ಬಿದ್ದು ಹೋದರೆ ಚುನಾವಣೆಗೆ ಹೋಗಲೇಬೇಕಲ್ಲ ಎಲ್ಲರೂ. ನಾವು ರೆಡಿಯಾಗಲೇಬೇಕಲ್ಲ ಅದು ನಮ್ಮ ಜವಾಬ್ದಾರಿ.

ಎಲ್ಲ ಪಕ್ಷಗಳು ಚುನಾವಣೆಯ ವಾತಾವರಣ ಬಂದಾಗ ರೆಡಿ ಆಗಲೇಬೇಕು. ನಾನು ಮಧ್ಯಂತರ ಚುನಾವಣೆ ಬಗ್ಗೆ ಚರ್ಚೆ ಮಾಡಲು ಹೋಗಲ್ಲ. ಜನ 136 ಸೀಟ್ ಕೊಟ್ಟಿದ್ದಾರೆ. ಸಂಪೂರ್ಣ ಅವಧಿ ಮುಗಿಸಿಕೊಳ್ಳಲು ಅವರಲ್ಲಿರುವ ಸಮಸ್ಯೆ ಬಗೆಹರಿಸಿಕೊಂಡು ಕೆಲಸ ಮಾಡಲಿ. ಸೋಮವಾರ ನಿವೃತ್ತ ಐಎಎಸ್ ಅಧಿಕಾರಿಯ ಸರ್ವೆ ರಿಪೋರ್ಟ್ ಒಂದನ್ನು ನೋಡಿದೆ. ಕೊಟ್ಟಿದ್ದ 138 ಭರವಸೆಗಳಲ್ಲಿ ಹಲವು ಭರವಸೆಗಳು ಈಡೇರಿಲ್ಲ ಅಂತ ವರದಿ ನೋಡಿದ್ದೇನೆ. ಕೇವಲ ಘೋಷಣೆಗೆ ಸೀಮಿತವಾಗದೆ ಜನರ ಸಮಸ್ಯೆಗಳಿಗೆ ಪರಿಹಾರ ತರಲಿ ಎಂದು ಆಗ್ರಹಿಸಿದರು.

ಕನ್ನಡ ರಾಜ್ಯೋತ್ಸವ ಹಿನ್ನೆಲೆಯಲ್ಲಿ ಬೆಂಗಳೂರಿನ ಸಪ್ನ ಬುಕ್‌ಹೌಸ್‌ನಲ್ಲಿ ಸಮಾರಂಭ ಆಯೋಜಿಸಲಾಗಿತ್ತು. ಕನ್ನಡ ಬರಹಗಾರರ ಸಮ್ಮಿಲನ ಕಾರ್ಯಕ್ರಮದಲ್ಲಿ ರಾಜ್ಯಸಭಾ ಸಂಸದೆ ಸುಧಾಮೂರ್ತಿ, ನಟ ಅನಿರುದ್ಧ, ನಟಿ ಅಂಕಿತಾ ಅಮರ್, ಜಾಣಗೇರೆ ವೆಂಕಟೇಶ್ ರಾಮಯ್ಯ ಉಪಸ್ಥಿತರಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.